


**ಯುವ ಸ್ಫೂರ್ತಿ**

ಪ್ರತಿಯೊಂದು ಕೆಲಸವೂ ಈ ಹಂತಗಳ ಮೂಲಕ ಹಾದುಹೋಗಬೇಕು. ಅಪಹಾಸ್ಯ, ವಿರೋಧ ಮತ್ತು ನಂತರ ಸ್ವೀಕಾರ

–ಸ್ವಾಮಿ ವಿವೇಕಾನಂದ

MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್ Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ Cell : 9743496111

ಸಂಪುಟ: 04 | ಸಂಚಿಕೆ : 183 | ಭಾನುವಾರ: 04–05–2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ:2–00

VOLUME: 04 | ISSUE: 183 | SUNDAY: 04–05–2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00


## ಕೃಷ್ಣ ಜಲವಿವಾದ ಸರ್ವಪಕ್ಷ ಸಭೆಗೆ ಸಿಎಂ ನಿರ್ಧಾರ

**ಬೆಂಗಳೂರು,ಮೇ 4:**ಕೃಷ್ಣ ಜಲವಿವಾದ ನ್ಯಾಯಮಂಡಳಿಯ ಅಂತಿಮ ತೀರ್ಪಿನ ಅನುಷ್ಠಾನ ಕುರಿತು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಸರ್ವಪಕ್ಷಗಳ ಸಭೆ ಕರೆಯಲು ಮುಖ್ಯಮಂತ್ರಿ ಸಿದ್ದರಾಮಯ್ಯ ನಿರ್ಧರಿಸಿದ್ದಾರೆ.

ಕೃಷ್ಣ ನ್ಯಾಯಾಧೀಕರಣ–2 ಗೆಜೆಟ್ ಅಧಿಸೂಚನೆ ಕುರಿತು ಚರ್ಚಿಸಲು ಕೇಂದ್ರ ಜಲಶಕ್ತಿ ಸಚಿವರು ಕರೆದಿರುವ ಕೃಷ್ಣ ಕಣಿವೆ ರಾಜ್ಯಗಳ ಜಲಸಂಪನ್ಮೂಲ ಸಚಿವರ ಸಭೆಯ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಅವರ ಅಧಿಕೃತ ನಿವಾಸ ಕಾವೇರಿಯಲ್ಲಿ ನಡೆದ ಉನ್ನತ ಮಟ್ಟದ ಸಭೆಯಲ್ಲಿ ಕಾವೇರಿ ನ್ಯಾಯಾಧೀಕರಣ ತೀರ್ಪಿನ ಅನುಷ್ಠಾನ ಸಂಬಂಧ ಕ್ರಮಗಳನ್ನು ಕೈಗೊಳ್ಳಲು ಸದ್ಯದಲ್ಲೇ ಸರ್ವಪಕ್ಷ ಸಭೆ ಕರೆಯುವ ತೀರ್ಮಾನವನ್ನು ಕೈಗೊಳ್ಳಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸರ್ವಪಕ್ಷ ಸಭೆಗೆ ತಿಳಿಸಿದರು. ರಾಜ್ಯದ ರೈತರ ಹಿತಾಸಕ್ತಿ ಕಾಪಾಡಲು ಸರ್ಕಾರ ಬದ್ಧವಾಗಿದ್ದು, ರಾಜ್ಯದ ಪಾಲಿನ ನೀರನ್ನು ಪಡೆದುಕೊಳ್ಳಲು ಕಾನೂನು ಕ್ರಮಗಳು ಸೇರಿದಂತೆ ಎಲ್ಲ ಪ್ರಯತ್ನ ನಡೆಸುವಂತೆ ಮುಖ್ಯಮಂತ್ರಿಯವರು ಸೂಚನೆ ನೀಡಿದರು. ಕೃಷ್ಣ ಜಲವಿವಾದ ನ್ಯಾಯಮಂಡಳಿ ಅಂತಿಮ ತೀರ್ಪಿನ ಗೆಜೆಟ್ ಅಧಿಸೂಚನೆ ಪ್ರಕಟಿಸಲು ಮತ್ತು ಸೆಪ್ಟೆಂ



ಬರ್ 16ರ ಸುಪ್ರೀಂಕೋರ್ಟ್ ಆದೇಶವನ್ನು ಮಾರ್ಪಡಿಸಲು ಕೋರಿ ನ್ಯಾಯಾಲಯದಲ್ಲಿ ಅರ್ಜಿ ದಾಖಲಿಸಲು ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರುವ ತೀರ್ಮಾನವನ್ನು ಈ ಉನ್ನತ ಮಟ್ಟದ ಸಭೆಯಲ್ಲಿ ಕೈಗೊಳ್ಳಲಾಗಿದೆ.

ನ್ಯಾಯಾಧೀಕರಣದ ಅಂತಿಮ ತೀರ್ಪು ಕೇಂದ್ರ ಸರ್ಕಾರದ ಗೆಜೆಟ್ ಅಧಿಸೂಚನೆಗೆ ಒಳಪಟ್ಟಿದ್ದು, ಈ ಕುರಿತಾಗಿ ಹಲವು ಬಾರಿ ಮನವಿ ಸಲ್ಲಿಸಿದ್ದರೂ ಇನ್ನೂ ಅಧಿಸೂಚನೆಯಾಗಿರುವುದಿಲ್ಲ. ನ್ಯಾಯಾಧೀಕರಣ ಅಂತಿಮ ತೀರ್ಪು ನೀಡಿ 15 ವರ್ಷಗಳೇ ಕಳೆದಿವೆ. ಉತ್ತರ ಕರ್ನಾಟಕದ

2ನೇ ಪುಟಕ್ಕೆ

## ನಾಲ್ಕು ಕೋಟಿ ರೂಪಾಯಿ ವೆಚ್ಚದ ರಸ್ತೆ ಕಾಮಗಾರಿಗೆ ಶಿಲಾನ್ಯಾಸ



**ಯುವ ಮಾರ್ಗ ಸುದ್ದಿ**

**ಮಾನ್ವಿ,ಮೇ–4–**ಪೋತ್ನಾಳ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ದೂತರಬಂಡಿ ಬೆಳವಾಟ–ಊಟಕನುರ್ ಗ್ರಾಮದವರೆಗೆ ಸುಮಾರು ನಾಲ್ಕು ಕೋಟಿ ರೂಪಾಯಿಗಳ ವೆಚ್ಚದಲ್ಲಿ ನಿರ್ಮಾಣಗೊಳ್ಳಲಿರುವ ರಸ್ತೆ ಕಾಮಗಾರಿಗೆ ಇಂದು ಶಂಕು ಸ್ಥಾಪನೆ ನೆರವೇರಿಸಲಾಯಿತು.

ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಶರಣಪ್ರಕಾಶ ಪಾಟೀಲ್ ಶಂಕು ಸ್ಥಾಪನೆ ನೆರವೇರಿಸಿದರು.ಈ ಸಂದರ್ಭದಲ್ಲಿ ಸಣ್ಣ ನೀರಾವರಿ ಮತ್ತು ವಿಜ್ಞಾನ ತಂತ್ರಜ್ಞಾನ ಸಚಿವರ ಜಿ.ಹಂಪಯ್ಯ ನಾಯುಕ್ ಸಾಹುಕಾರ್,

2ನೇ ಪುಟಕ್ಕೆ

## ಪ್ರಜಾಸೌಧ ಕಾಮಗಾರಿಗೆ ಉಸ್ತುವಾರಿ ಸಚಿವರಿಂದ ಚಾಲನೆ

**ಯುವ ಮಾರ್ಗ ಸುದ್ದಿ**



**ಮಾನ್ವಿ.ಮೇ.4– ನಗರದ ಅಂಬೇಡ್ಕರ್ ವೃತ್ತದ ಬಳಿಯ ನೀರಾವರಿ ಇಲಾಖೆ ಆವರಣದಲ್ಲಿ ಪ್ರಜಾಸೌಧ ಕಟ್ಟ ನಿರ್ಮಾಣ ಕಾಮಗಾರಿಗೆ ಹಾಗೂ ಮಾನ್ವಿ ಬಸ್ ಘಟಕದ ನೂತನ ಮಾರ್ಗಗಳಾದ(ಮಾನ್ವಿ–ಕಪಗಲ್–ರಾಜೋಳ್ಳಿ–ಗಿಲ್ಲೆಸುಗೂರು–ಮಂತ್ರಾಲಯ) ಮತ್ತು (ಮಾನ್ವಿ–ಅಂಜನಾದ್ರಿ–ಹುಲಿಗಿ–ಹೊಸಪೇಟೆ)ಬಸ್ ಗಳಿಗೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಶರಣಪ್ರಕಾಶ ಪಾಟೀಲ್ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಸಚಿವ ಎನ್.ಎಸ್.ಬೋಸರಾಜು, ಶಾಸಕ ಹಂಪಯ್ಯ ನಾಯಕ, ಕಾಂಗ್ರೆಸ್ ಮುಖಂಡರಾದ ಬಾಲಸ್ವಾಮಿ ಕೊಡ್ಲಿ, ಬಿ.ಕೆ.ಅಮರೇಶಪ್ಪ, ಗಫೂರ್ ಸಾಬ್, ಶರಣಯ್ಯ ನಾಯಕ ಗುಡದನ್ನ ಮಹಾಂತೇಶ ಸ್ವಾಮಿ ರೌಡೂರು, ಹೊನ್ನಪ್ಪ ಹೆಳವರ್, ಹುಸೇನ್ ಬೇಗ್, ಸಾಬೀರ್ ಪಾಶ ಗುತ್ತಿಗೆದಾರ ಎಂ.ಈರಣ್ಣ, ಪ್ರವೀಣ್ ಕುಮಾರ ಸೇರಿದಂತೆ ಆನೇಕರು ಇದ್ದರು.**

## ಸ್ವಾಮಿ ವಿವೇಕಾನಂದ ಶಾಲೆಗೆ ಶೇ.100ರಷ್ಟು ಫಲಿತಾಂಶ

**ಯುವ ಮಾರ್ಗ ಸುದ್ದಿ**

**ದೇವದುರ್ಗ,ಮೇ.4:** ತಾಲೂಕಿನ ಸುಂಕೇಶ್ವರಹಾಳ ಗ್ರಾಮದ ಜಾಗೃತಿ ಶಿಕ್ಷಣ ಸಂಸ್ಥೆಯ ಸ್ವಾಮಿ ವಿವೇಕಾನಂದ ಆಂಗ್ಲ ಮಾಧ್ಯಮ ಪ್ರೌಢಶಾಲೆಯ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿದ್ದು, ಈ ಶಾಲೆಗೆ ಶೇ 100ರಷ್ಟು ಫಲಿತಾಂಶ ಲಭ್ಯಸಿದೆ.



**ಮದನ ಕುಮಾರ್**
**625ಕ್ಕೆ 610 ಅಂಕ ಶೇ 97.6%**



**ಮನೋಜ್**
**625ಕ್ಕೆ 562 ಅಂಕ ಶೇ 90%**



**ತ್ರಿಶಾ**
**625ಕ್ಕೆ 539 ಅಂಕ ಶೇ 86.24%**

ಶುಕ್ರವಾರ ಎಸ್ಸೆಸ್ಸೆಲ್ಸಿ ಫಲಿತಾಂಶ ಪ್ರಕಟಣೆಯಾಗಿದ್ದು, ಶಾಲೆಯ ಮದನ ಕುಮಾರ್ ತಂ ಅಶೋಕ್ ಸಾ. ಸುಂಕೇಶ್ವರಹಾಳ ಈ ವಿದ್ಯಾರ್ಥಿಯು 625ಕ್ಕೆ 610 ಅಂಕ ಶೇ 97.6% ಪಡೆದು ಶಾಲೆಗೆ ಪ್ರಥಮ ಸ್ಥಾನ, ಮನೋಜ್ ತಂ ಬೂದಯ್ಯ ಸಾ. ಶಾವಂತಗೇರಾ 562 ಅಂಕ ಶೇ 90% ಶಾಲೆಗೆ ದ್ವಿತೀಯ ಸ್ಥಾನ ಮತ್ತು ತ್ರಿಶಾ ತಂ ಅಂಜನೆಯ್ಯ ಸಾ. ರಾಮದುರ್ಗ 539 ಅಂಕ ಶೇ 86.24% ಶಾಲೆಗೆ ತೃತೀಯ ಸ್ಥಾನ ಹಾಗೂ ಈ ಮೂರು ವಿದ್ಯಾರ್ಥಿಗಳು ಉನ್ನತ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದ್ದಾರೆ ಎಂದು ಮುಖ್ಯ ಶಿಕ್ಷಕಿ ಗಿರಿಲಿಂಗಮ್ಮ ವೆಂಕಟೇಶ ತಿಳಿಸಿದ್ದಾರೆ.

ಶಾಲೆಯ ಎಲ್ಲಾ ವಿದ್ಯಾರ್ಥಿಗಳು ಪ್ರಥಮ ಸ್ಥಾನ ಪಡೆದುಕೊಂಡಿದ್ದು. ಕಳೆದ ಬಾರಿಗಿಂತ ಈ ಬಾರಿ ಶಾಲೆಯ ಫಲಿತಾಂಶ ಶೇ 3 ರಷ್ಟು ಹೆಚ್ಚಳವಾಗಿದೆ. ವಿದ್ಯಾರ್ಥಿಗಳ ಸಾಧನೆಗೆ ಶಾಲೆಯ ಆಡಳಿತ ಮಂಡಳಿ ಮತ್ತು ಶಿಕ್ಷಕರು ಅಭಿನಂದಿಸಿದ್ದಾರೆ.

## ಸಚಿವರ ಕಾರ್ಯಕರ್ತನ ಮಧ್ಯೆ ವಾಗ್ವಾದ

## ಮಾಹಿತಿ ನೀಡದೇ ಕ್ಷೇತ್ರಕ್ಕೆ ಯಾಕೇ ಬರ್ತೀರಿ ಸರ್.. ಕಾರ್ಯಕರ್ತನ ಪ್ರಶ್ನೆಗೆ ಸಚಿವರು ಗರಂ

**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಮೇ.4–** 'ಕ್ಷೇತ್ರಕ್ಕೆ ಬರುವಾಗ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಿಗೆ, ಕಾರ್ಯಕರ್ತರಿಗೆ ಮಾಹಿತಿ ನೀಡದೇ ಯಾಕೆ ಬರ್ತೀರಿ ಸರ್. ಇನ್ನೊಮ್ಮೆ ಹೀಗೆ ಮಾಡುವುದಾದರೆ ನಮ್ಮ ಕ್ಷೇತ್ರಕ್ಕೆ ಬರಬೇಡಿ' ಎಂದು ರಾಯಚೂರು ಜಿಲ್ಲೆ ಉಸ್ತುವಾರಿ ಸಚಿವ ಶರಣ ಪ್ರಕಾಶ್ ಪಾಟೀಲ್‌ರಿಗೆ ಕೈ ಕಾರ್ಯಕರ್ತ ಗದ್ದೆನಗೌಡ ಪ್ರಶ್ನೆ ಮಾಡಿದ್ದಾರೆ.

ಸಚಿವರು ಕಾರ್ಯಕ್ರಮವೊಂದಕ್ಕೆ ತೆರಳುತ್ತಿರುವ ವೇಳೆ ಮಾರ್ಗ ಮಧ್ಯೆ ಲಿಂಗಸುಗೂರು ಪಟ್ಟಣದ ಪ್ರವಾಸಿ ಮಂದಿರಕ್ಕೆ ತೆರಳಿ, ಕೆಲ ಮುಖಂಡರು ಹಾಗೂ ಸುದ್ದಿ



ಗಾರರೊಂದಿಗೆ ಮಾತನಾ ಡುತ್ತಿದ್ದರು. ಈ ವೇಳೆ ಸ್ಥಳಕ್ಕೆ ಬಂದ ಕಾರ್ಯಕರ್ತ ಗದ್ದೆನ ಗೌಡ ಸಚಿವರ ವಿರುದ್ಧ ಟೀಕೆ ಮಾಡಲಾರಂಭಿಸಿದ. ಇಲ್ಲಿಗೆ ನಾಲ್ಕಾರು ಬಾರಿ ನೀವು ಲಿಂಗಸುಗೂರಿಗೆ ಬಂದರೂ ಬ್ಲಾಕ್ ಅಧ್ಯಕ್ಷರಿಗೆ ಮಾಹಿತಿಯೇ ಇಲ್ಲ. ಬಂದರೂ ನಿಮಗೆ ಬೇಕಿದ್ದವರನ್ನು ಭೇಟಿಯಾಗಿ ಹೋಗ್ತೀರಿ. ಕಾರ್ಯಕರ್ತರ ಕುಂದುಕೊರತೆ ಆಲಿಸುವುದೇ ಇಲ್ಲ ಹೀಗಾದರೆ ನೀವು ಇನ್ನೊಮ್ಮೆ ನಮ್ಮ ಕ್ಷೇತ್ರಕ್ಕೆ ಬರಬೇಡಿ ಎಂದು ಹೇಳಿದರು. ಇದನ್ನು ಕೇಳಿ ಕೆರಳಿದ ಸಚಿವರು, 'ನಾನ್ಸೆನ್ಸ್ ಯಾರೋ ನೀನು ನಡಿ ಇಲ್ಲಿಂದ ' ಎಂದು ಕಾರ್ಯಕರ್ತರಿಗೆ ತರಾಟೆಗೆ ತೆಗೆದುಕೊಂಡರು.

2ನೇ ಪುಟಕ್ಕೆ

## ಸುಹಾಸ್ ಕೊಲೆ ಪ್ರಕರಣ 8 ಮಂದಿ ಸೆರೆ

**ಮಂಗಳೂರು,ಮೇ,4–**ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣಗೊಂಡ ಹಿಂದೂ ಕಾರ್ಯಕರ್ತ ರೌಡಿ ಶೀಟರ್ ಸುಹಾಸ್ ಶೆಟ್ಟಿ ಕೊಲೆ ಪ್ರಕರಣಕ್ಕೆ ಸಂಬಂಧ 8 ಮಂದಿ ಆರೋಪಿಗಳನ್ನು ನಗರ ಪೊಲೀಸರು ಬಂಧಿಸಿ ವಿಚಾರಣೆ ನಡೆಸಿದ್ದಾರೆ.

ಮಂಗಳೂರು ಮೂಲದ ಸಫ್ವಾನ್ ಗ್ಯಾಂಗ್ ಸುಹಾಸ್‌ನನ್ನು ಹತ್ಯೆ ಮಾಡಿರುವುದು ತನಿಖೆಯಲ್ಲಿ ಬಯಲಾಗಿದೆ.ಸಫ್ವಾನ್(29) ನಿಯಾಜ್ (28),ಮೊಹಮ್ಮದ್ ಮಿಜಾಮಲ್ (32), ಕಲಂದರ್ ಶಾಫಿ(31), ಮೊಹಮ್ಮದ್ ಇರಜವಾನ್(28), ಚಿಕ್ಕಮಗಳೂರಿನ ರಂಜಿತ್(19)ಹಾಗೂ ನಾಗರಾಜ್(20) ಬಂಧಿತ ಆರೋಪಿಗಳಾಗಿದ್ದಾರೆ.

ಬಂಧಿತರಲ್ಲಿ ಸಫ್ವಾನ್ ಹಿಂದೂ ಕಾರ್ಯಕರ್ತ ಸುಹಾಸ್ ಶೆಟ್ಟಿ ಪ್ರಮುಖ ಆರೋಪಿಯಾಗಿದ್ದಾನೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಸುಹಾಸ್ ಶೆಟ್ಟಿಯ ಸ್ನೇಹಿತ ಪ್ರಶಾಂತ್‌ಗೂ ಸಫ್ವಾನ್ ನಡುವೆ ಎರಡು ವರ್ಷಗಳ ಹಿಂದೆ ಗಲಾಟೆ ಉಂಟಾಗಿತ್ತು. 2023ರಲ್ಲಿ ಪ್ರಶಾಂತ್ ಸಫ್ರಾನ್‌ಗೆ ಚೂರಿ ಇರಿದಿದ್ದ. ಈ ವೇಳೆ ಸುಹಾಸ್ ಪ್ರಶಾಂತ್ ಪರವಾಗಿ ನಿಂತಿದ್ದರು. ಇದಕ್ಕೆ

2ನೇ ಪುಟಕ್ಕೆ

## ಬೆಲೆ ಏರಿಕೆ ವಿರೋಧಿಸಿ ಕೇಂದ್ರ ಸರ್ಕಾರದ ವಿರುದ್ಧ ಬೃಹತ್ ಹೋರಾಟ

**ಯುವ ಮಾರ್ಗ ಸುದ್ದಿ**



**ಲಿಂಗಸಗೂರು,ಮೇ.4–ಕೇಂದ್ರ ಸರ್ಕಾರ ಜನ ವಿರೋಧಿ ಸರ್ಕಾರವಾಗಿದೆ. ದೇಶದಲ್ಲಿ ಬೆಲೆ ಏರಿಕೆ ಮಾಡಿ ಜನ ಸಾಮಾನ್ಯರ ಜೇಬಿಗೆ ಕತ್ತರಿ ಹಾಕಿದೆ. ಇದು ದೇಶದ ಜನೆತೆಗೆ ಗೊತ್ತಿರುವ ವಿಚಾರ ಆದರೆ ರಾಜ್ಯ ಬಿಜೆಪಿ ನಾಯಕರು ಬೆಲೆ ಏರಿಕೆಗೆ ಕಾಂಗ್ರೆಸ್ ಸರ್ಕಾರ ಕಾರಣ ಅಂತೇಳಿ ರಾಜ್ಯದ ಜನತೆಗೆ ತಪ್ಪು ಸಂದೇಶ ಕೊಡುತ್ತಿದ್ದಾರೆ. ಆದ್ದರಿಂದ ನಾವು ಇದೆ ಮೇ 07 ರಂದು ಕೇಂದ್ರ ಸರ್ಕಾರದ ವಿರುದ್ಧ ರಾಯಚೂರುನಲ್ಲಿ ಬ್ರಹತ್ ಹೋರಾಟವನ್ನು ಹಮ್ಮಿಕೊಳ್ಳುತ್ತೇವೆ ಎಂದು ರಾಯಚೂರು ಉಸ್ತುವಾರಿ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಹೇಳಿದರು.**

**ಶನಿವಾರ ಪಟ್ಟಣದಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು ಕೇಂದ್ರ ಸರ್ಕಾರದ ವಿರುದ್ಧ ಇಡೀ ಕಲ್ಯಾಣ ಕರ್ನಾಟಕ ಭಾಗದ ಜನತೆ ಹಾಗೂ ನಾಯಕರನ್ನು ಸೇರಿಸಿ ರಾಯಚೂರಿನಲ್ಲಿ ಇದೆ ಮೇ.07 ರಂದು ಬ್ರಹತ್ ಹೋರಾಟವನ್ನು ಹಮ್ಮಿಕೊಳ್ಳಲಾಗಿದೆ. ಈ ಹೋರಾಟ ಸುಳ್ಳು ಬಿಜೆಪಿ ವಿರುದ್ಧವಾದ ಹೋರಾಟ ಆದ್ದರಿಂದ ಎಲ್ಲರೂ ಈ ಹೋರಾಟದಲ್ಲಿ ಪಾಲ್ಗೊಳ್ಳಿ ಎಂದು ಕರೆಕೊಟ್ಟರು.**

### ಫಲಿತಾಂಶ ಸುಧಾರಣೆಗೆ ಕ್ರಮ ತಗೆದುಕೊಳ್ಳುತ್ತೇವೆ

ಈ ವರ್ಷದ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶದಲ್ಲಿ ಜಿಲ್ಲೆ ಕೆಳಗಿಂದ ನಾಲ್ಕನೇ ಸಾಲಿನಲ್ಲಿದೆ ಇದು ನಮಗೆ ತೃಪ್ತಿ ಇಲ್ಲ. ನಮ್ಮ ಜಿಲ್ಲೆಯಲ್ಲಿ ಶಿಕ್ಷಕರ ಕೊರತೆ ಇದೆ. ಅದು ಅತಿಥಿ ಶಿಕ್ಷಕರನ್ನು ನೆಚ್ಚಿಕೊಂಡಿದೆ. ಇದರಿಂದಾಗಿ ಫಲಿತಾಂಶ ಕಡಿಮೆ ಬಂದಿದೆ. ಇನ್ನೂ ಎರಡು ಮೂರು ತಿಂಗಳಲ್ಲಿ ಒಳಮೀಸಲಾತಿ ಜಾರಿಯಾದ ನಂತರ ಕಲ್ಯಾಣ ಕರ್ನಾಟಕಕ್ಕೆ 5500 ಶಿಕ್ಷರನ್ನು ನೇಮಕ ಮಾಡಿಕೊಂಡು.ಮುಂದಿನ ವರ್ಷದ ಫಲಿತಾಂಶ ಸುಧಾರಣೆಗೆ ಶ್ರಮ ವಹಿಸುತ್ತೇವೆ.ನಂತರದ ದಿನಗಳಲ್ಲಿ ಇನ್ನೂ ಹೆಚ್ಚುವಾರಿಯಾಗಿ 5000 ಶಿಕ್ಷರನ್ನು ನೇಮಕಾತಿ ಮಾಡಿಕೊಳ್ಳಲು ಪ್ರಾಮಾಣಿಕವಾಗಿಯತ್ನಿಸುವೆ. ನಮ್ಮ ಸರ್ಕಾರದ ಗುರಿ ಗುಣಮಟ್ಟದ ಶಿಕ್ಷಣವನ್ನು ಕೊಡುವುದಾಗಿದೆ ಎಂದರು.

### ಜಾತಿ ಗಣತಿ ಬಗ್ಗೆ 09 ನೇ ತಾರೀಕಿಗೆ ಚರ್ಚೆ

ಜಯಪ್ರಕಾಶ್ ಹೆಗಡೆ ವರದಿಯ ಬಗ್ಗೆ ಚರ್ಚೆ ಕ್ಯಾಬಿನೆಟ್ ನಲ್ಲಿ ಇದೆ 09 ಕ್ಕೆ ನಿರ್ಣಯ ಆಗುತ್ತೆ.ಎಲ್ಲ ಸಚಿವರು ಇನ್ನೂ ಇದರ ಬಗ್ಗೆ ಉತ್ತರ ಕೊಟ್ಟಿಲ್ಲ.ಕ್ಯಾಬಿನೆಟ್ ನಲ್ಲಿ ಚರ್ಚಿಸಿದ ನಂತರ ಎಲ್ಲಾ ಸಚಿವರು ಒಮ್ಮತವಾದ ನಂತರ ಆದರ ಬಗ್ಗೆ ಮಾತನಾಡೋಣ.ಇದರ ಬಗ್ಗೆ ನಾವು ಈ ಸಂರ್ಭದಲ್ಲಿ ಚರ್ಚಿಸುವದು ಬೇಡ ಎಂದರು.

### ಖಾಸಗಿ ಸಂಸ್ಥೆಗಳು ಅಧಿಕವಾಗಿ ಫಿ ವಸೂಲಿ ಮಾಡಿದರೆ ಕ್ರಮ:

ತಾಲೂಕಿನಲ್ಲಿ ಇರುವ ಖಾಸಗಿ ಶಾಲೆ– ಕಾಲೇಜ್‌ಗಳು ಜನರಿಂದ ಸರ್ಕಾರದ ನಿಯಮ ಮೀರಿ ಪೀ ವಸೂಲಾತಿ ಮಾಡಬಾರದು ಒಂದು ವೇಳೆ ಆ ಪ್ರಕರಣಗಳು ಕಂಡು ಬಂದರೆ ಸಂಬಂಧ ಪಟ್ಟ ಡಿಡಿಪಿಐ ಮತ್ತು ಡಿಡಿಪಿ ಯು ಈ ಅಧಿಕಾರಿಗಳಿಗೆ ಪಾಲಕರು ಲಿಖಿತವಾಗಿ ದೂರು ಕೊಟ್ಟರೆ ನಮ್ಮ ಅಧಿಕಾರಿಗಳು ಮುಲಾಜಿಲ್ಲದೆ ಕ್ರಮ ಕೈಗೊಳ್ಳತ್ತಾರೆ.

### ಅಕ್ರಮ ಮರಳು ದಂಧೆಗೆ ಬ್ರೇಕ್

ಈಗಾಗಲೇ ಜಿಲ್ಲೆಯ ದೇವದುರ್ಗ ಮತ್ತು ಮಾನ್ವಿಯಲ್ಲಿ ಅಧಿಕವಾಗಿ ಅಕ್ರಮ ಮರುಳುಗಾರಿಕೆ ನಡೆಯುತ್ತಿದೆ ಎಂಬ ಮಾಹಿತಿ ಇದೆ. ಕುರಿತು ಅಲ್ಲಿನ ಅಧಿಕಾರಿಗಳು ಇತ್ತೀಚಿಗೆ ಟೆಂಡರ್ ಕರೆದು ಅಕ್ರಮ ಮರಳು ಗಣಿಗರಿಕೆ ತಡೆದ್ದಿದ್ದಾರೆ ಎಂದು ಅಧಿಕಾರಿಗಳು ಹೇಳಿದ್ದಾರೆ.ಅಕ್ರಮ ಮರಳು ಗಾಣಿಗರಿಕೆ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು.

## ಮೊದಲನೇಯ ಪುಟದಿಂದ

# ಸರ್ವಪಕ್ಷ ಸಭೆಗೆ ಸಿಎಂ ನಿರ್ಧಾರ

ಯುಕೆಪಿ–3 ಯೋಜನೆಯ ಪ್ರದೇಶದಲ್ಲಿನ ರೈತರು ತಮ್ಮ ಹಕ್ಕಿನ ಪಾಲನ್ನು ಬಳಸಲು ಬಹಳ ವರ್ಷಗಳಿಂದ ಕಾಯುತ್ತಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.ಕಾವೇರಿ ಜಲವಿವಾದ ನ್ಯಾಯಮಂಡಳಿ ತೀರ್ಪಿಗೆ ಸಂಬಂಧಿಸಿದಂತೆ ಸಿವಿಲ್ ಮೇಲ್ಮನವಿಗಳು ಬಾಕಿ ಇರುವಾಗಲೇ ಕಾವೇರಿ ನ್ಯಾಯಾಧೀಕರಣದ ತೀರ್ಪು ಪ್ರಕಟಿಸಲು ಸುಪ್ರೀಂಕೋರ್ಟ್ ನಿರ್ದೇಶಿಸಿರುತ್ತದೆ. ಇದೇ ರೀತಿ ಮಹದಾಯಿ ಜಲವಿವಾದದ ನ್ಯಾಯಮಂಡಳಿಯ ತೀರ್ಪಿನ ಪ್ರಕಟಣೆಗೂ ಸುಪ್ರೀಂ ಆದೇಶಿಸಿದೆ. ಅದರಂತೆ 2 ನ್ಯಾಯಾಧೀಕರಣಗಳ ತೀರ್ಪನ್ನು ಕೇಂದ್ರ ಸರ್ಕಾರ ಗೆಜೆಟ್ ಅಧಿಸೂಚನೆ ಹೊರಡಿಸಿರುತ್ತದೆ. ಇದೇ ರೀತಿಯಲ್ಲಿ ಕೃಷ್ಣ ನ್ಯಾಯಾಧೀಕರಣದ ತೀರ್ಪನ್ನು ಗೆಜೆಟ್ ಅಧಿಸೂಚನೆ ಹೊರಡಿಸುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಲು ಈ ಸಭೆಯಲ್ಲಿ ನಿರ್ಧರಿಸಲಾಗಿದೆ.ಈ ಸಭೆಯಲ್ಲಿ ಉಪಮುಖ್ಯಮಂತ್ರಿ ಹಾಗೂ ಜಲಸಂಪನ್ಮೂಲ ಸಚಿವ ಡಿ.ಕೆ ಶಿವಕುಮಾರ್, ಸಚಿವರಾದ ಎಚ್.ಕೆ ಪಾಟೀಲ್, ಎಂಬಿ ಪಾಟೀಲ್, ಶಿವಾನಂದ ಪಾಟೀಲ್, ಆರ್.ಬಿ ತಿಮ್ಮಾಪುರ, ಶರಣ ಬಸಪ್ಪ ದರ್ಶನಾಪುರ, ಡಾ. ಎಚ್‌ಸಿ ಮಹದೇವಪ್ಪ, ಸರ್ಕಾರದ ಮುಖ್ಯಕಾರ್ಯದರ್ಶಿ ಶಾಲಿನಿ ರಜನೀಶ್, ನ್ಯಾಯವಾದಿ ಮೋಹನ್ ಕಾತರಗಿ ಮತ್ತಿತರರು ಉಪಸ್ಥಿತರಿದ್ದರು.

# ಸಚಿವರ ಕಾರ್ಯಕರ್ತನ ಮಧ್ಯೆ ವಾಗ್ವಾದ

ಕೆಲಹೊತ್ತು ಇಬ್ಬರ ಮಧ್ಯೆ ಮಾತಿನ ಚಕಮಕಿ ನಡೆಯಿತು. ಪರಿಸ್ಥಿತಿ ವಿಕೋಪಕ್ಕೆ ತೆರಳುವ ಸೂಕ್ಷ್ಮತೆ ಅರಿತು ಮಧ್ಯೆ ಪ್ರವೇಶಿಸಿದ ಡಿವೈಎಸ್ಪಿ ದತ್ತಾತ್ರೇಯ ಕಾರ್ನಾಡ್ ಸಚಿವರನ್ನು ಕರೆದೊಯ್ದರು.

ಕ್ಷಮೆಗೆ ಒತ್ತಾಯ : ಕಾರ್ಯಕರ್ತರ ಬಗ್ಗೆ ಹಗುರವಾಗಿ ಮಾತನಾಡಿದ ಸಚಿವರು ಕೂಡಲೇ ಕ್ಷಮೆ ಯಾಚಿಸಬೇಕು ಎಂದು ಗದ್ದೆನಗೌಡ ಹೇಳಿದರು. ಪತ್ರಕರ್ತರೊಂದಿಗೆ ಮಾತನಾಡಿದ ಗದ್ದೆನಗೌಡ ಸಚಿವರು ಲಿಂಗಸುಗೂರು ಕ್ಷೇತ್ರಕ್ಕೆ ಭೇಟಿ ನೀಡುವಾಗ ಯಾರಿಗೂ ಮಾಹಿತಿ ಇರುವುದಿಲ್ಲ. ಅಲ್ಲದೇ ಕಾರ್ಯಕರ್ತರ ಕುಂದು ಕೊರತೆಗಳನ್ನು ಆಲಿಸುವುದೇ ಇಲ್ಲ. ಕೇಳಲು ಹೋದರೆ ಏಕ ವಚನದಲ್ಲಿ ಬೈಯುವುದು ಯಾವ ಸಂಪ್ರದಾಯ. ಕೂಡಲೇ ಸಚಿವರು ಕ್ಷಮೆ ಯಾಚನೆ ಮಾಡಬೇಕು ಎಂದು ಒತ್ತಾಯಿಸಿದರು.

# ರಸ್ತೆ ಕಾಮಗಾರಿಗೆ ಶಿಲಾನ್ಯಾಸ

ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರದ ಶಾಸಕ ರಾದ ದದ್ದಲ್ ಬಸನಗೌಡ, ಕೆ.ಶಾಂತಪ್ಪ, ಶಿವಮೂರ್ತಿ, ಅಮರೇಗೌಡ ಹಂಚಿನಾಳ, ರುದ್ರಪ್ಪ ಅಂಗಡಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಅಬ್ದು ಲ್ ಗಫೂರ್ ಸಾಬಾ, ಪಂಚ ಗ್ಯಾರಂಟಿಗಳ ಅಧ್ಯಕ್ಷರಾದ ಬಿ.ಕೆ.ಅಂಬರೇಶಪ್ಪ ವಕೀಲರು, ಶ್ರೀಶೈಲ್ ಗೌಡ, ಮಲ್ಲಯ್ಯ ಉಟುಕುನ್ನೂರು, ಶಿವಪುತ್ರಪ್ಪ ಪೊಲೀಸ್ ಪಾಟೀಲ್, ಎಸ್ ಎಂ ಪಾಟೀಲ್, ಪಂಪನಗೌಡ ಪೋತ್ನಾಳ, ವೀರನಗೌಡ ಉದ್ಬ ಳ್ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಹಾಗೂ ಗ್ರಾಮದ ಮುಖಂಡರು ಉಪಸ್ಥಿತ ರಿದ್ದರು.

# ಸುಹಾಸ್ ಕೊಲೆ ಪ್ರಕರಣ 8 ಮಂದಿ ಸೆರೆ

ಪ್ರತೀಕಾರವಾಗಿ ಈ ಕೊಲೆ ನಡೆದಿದೆ ಎನ್ನಲಾಗಿದೆ.ಮಂಗಳೂರಿನಲ್ಲಿ ಸುಹಾಸ್ ಶೆಟ್ಟಿ ಕೊಲೆ ಮಾಡಿದ ಬಳಿಕ ಪರಾರಿಯಾಗಿದ್ದ ಹಂತಕರು ಮಂಗಳೂರಿನಲ್ಲಿಯೇ ಅವಿತುಕೊಂಡಿದ್ದ ಬಗ್ಗೆ ಮಾಹಿತಿ ಪಡೆದ ಪೊಲೀಸರು 8 ಆರೋಪಿಗಳನ್ನು ವಶಕ್ಕೆ ಪಡೆದು ತೀವ್ರ ವಿಚಾರಣೆ ನಡೆಸಿದ್ದಾರೆ ಎನ್ನಲಾಗಿದೆ. ಇನ್ನು ಇದು ಪ್ರತೀಕಾರಕ್ಕಾಗಿಯೇ ನಡೆದಿರುವ ಹತ್ಯೆ ಎನ್ನಲಾಗಿದೆ.ಕೊಲೆ ವಿಡಿಯೋ ಸಾಕ್ಷ್ಯದ ಆಧಾರದ ಮೇಲೆ ಮಂಗಳೂರು ಪೊಲೀಸರು ಎಂಟು ಮಂದಿ ಶಂಕಿತ ಆರೋಪಿಗಳನ್ನು ವಶಕ್ಕೆ ಪಡೆಯಲಾಗಿದ್ದು, ಆ ಪೈಕಿ ಇಬ್ಬರು ಹಿಂದೂ ಯುವಕರನ್ನು ಬಂಧಿಸಿದ್ದಾರೆ.ಕೊಲೆ ಕೃತ್ಯದಲ್ಲಿ ಭಾಗಿಯಾದವರ ಜೊತೆ ಹಿಂದೂ ಯುವಕರು ಸೇರಿದ್ದರು ಎನ್ನುವ ಮಾಹಿತಿ ಲಭ್ಯವಾಗಿದ್ದು, ದಕ್ಷಿಣ ಕನ್ನಡ ಜಿಲ್ಲೆಯಲ್ಲೇ ಅವಿತು ಕುಳಿತಿದ್ದ ಕೆಲವರನ್ನು ಪೊಲೀಸರು ವಶಕ್ಕೆ ಪಡೆದು ತೀವ್ರ ವಿಚಾರಣೆ ನಡೆಸುತ್ತಿದ್ದಾರೆ.ಬಂಧಿತ ಹಾಗೂ ವಶಕ್ಕೆ ತೆಗೆದುಕೊಂಡಿರುವ ಎಲ್ಲಾ ಆರೋಪಿಗಳನ್ನು ತೀವ್ರ ವಿಚಾರಣೆ ನಡೆಸಲಾಗುತ್ತಿದೆ. ಆರೋಪಿಗಳು ಮಂಗಳೂರಿನಲ್ಲೇ ಅವಿತ್ತಿದ್ದರು ಎಂದು ತಿಳಿದುಬಂದಿದ್ದು,ಕಾರ್ಯಾಚರಣೆ ಕೈಗೊಂಡ ಪೊಲೀಸ್ ವಿಶೇಷ ತಂಡಗಳು ಆರೋಪಿಗಳನ್ನು ಬಲೆಗೆ ಕೆಡವಿದ್ದಾರೆ.ವಿಚಾರಣೆಯಲ್ಲಿ ಯಾವ ವಿಚಾರ ಕೊಲೆ ನಡೆಸಲಾಗಿದೆ, 2022ರಲ್ಲಿ ನಡೆದಿದ್ದ ಫಾಜಿಲ್ ಕೊಲೆಗೆ ಪ್ರತೀಕಾರವಾಗಿ ಕೊಲೆ ನಡೆದಿದೆಯೇ ಬೇರೆ ಕಾರಣ ಏನಾದರೂ ಇದೆಯಾ, ಇದೆಲ್ಲವೂ ತನಿಖೆಯಿಂದಷ್ಟೇ ಬಯಲಾಗಬೇಕಿದೆ.

# ಉಗ್ರರಿಗೆ ಹೋಲಿಸಿ ಕನ್ನಡಿಗರಿಗೆ ಅವಮಾನ : ಸೋನು ನಿಗಮ್ ವಿರುದ್ಧ ಭುಗಿಲೆದ್ದ ಆಕ್ರೋಶ



**ಬೆಂಗಳೂರು,ಮೇ 4–** ಬಾಲಿವುಡ್ ಗಾಯಕ ಸೋನು ನಿಗಮ್ ವಿರುದ್ಧ ಕನ್ನಡಿಗರು, ಕನ್ನಡಪರ ಸಂಘಟನೆಗಳು ಕೆರಳಿ ಕೆಂಡವಾಗಿವೆ. ಅಭಿಮಾನಿಯೊಬ್ಬರ ಕನ್ನಡ ಅಭಿಮಾನವನ್ನು ಪಹಲ್ಗಾಮ್ ಘಟನೆಗೆ ಹೋಲಿಸಿದ ಸೋನು ನಿಗಮ್ ವರ್ತನೆಯನ್ನು ತೀವ್ರವಾಗಿ ಖಂಡಿಸಿರುವ ಕನ್ನಡಪರ ಸಂಘಟನೆಗಳು ಬಹಿರಂಗ ಕ್ಷಮೆಗೆ ಆಗ್ರಹಿಸಿರುವುದಲ್ಲದೆ ಕನ್ನಡ ಚಿತ್ರರಂಗದಿಂದಲೇ ಸೋನು ನಿಗಮ್ ಅವರನ್ನು ನಿಷೇಧಿಸಬೇಕೆಂದು ಒತ್ತಾಯಿಸಿವೆ.

ಕರವೇ ಅಧ್ಯಕ್ಷ ನಾರಾಯಣ ಗೌಡ, ಡಾ.ರಾಜ್‌ಕುಮಾರ್ ಅಭಿಮಾನಿ ಬಳಗದ ಅಧ್ಯಕ್ಷ ಸಾ.ರಾ.ಗೋವಿಂದು, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪುರುಷೋತ್ತಮ್ ಬಿಳಿಮಲೆ, ಚಲನಚಿತ್ರ ನಿರ್ದೇಶಕರು, ಗಾಯಕರು, ಕನ್ನಡಪರ ಹೋರಾಟಗಾರರು ಸೇರಿದಂತೆ ಕನ್ನಡ ಮನಸ್ಸುಗಳು ಸೋನು ನಿಗಮ್ ಅವರ ಧೋರಣೆಯನ್ನು ಖಂಡಿಸಿ ಪ್ರತಿಭಟನೆ ನಡೆಸಿರುವುದಲ್ಲದೆ ಕಾನೂನು ಹೋರಾಟಕ್ಕೂ ಮುಂದಾಗಿವೆ. ಯಾವುದೇ ಕಾರಣಕ್ಕೂ ಸೋನು ನಿಗಮ್ ಅವರ ಕಾರ್ಯಕ್ರಮಗಳನ್ನು ಆಯೋಜಿಸಬಾರದು. ಯಾವುದಾದರೂ ಕಾರ್ಯಕ್ರಮ ನಡೆಸಿದರೆ ಅದಕ್ಕೆ ಆಯೋಜಕರೇ ಹೊಣೆಗಾರರು ಆಗಬೇಕಾಗುತ್ತದೆ. ಮುಂದಾಗುವ ಪರಿಣಾಮ ಎದುರಿಸಲು ಸಿದ್ಧರಾಗಬೇಕೆಂದು ನಿರ್ಮಾಪಕ, ನಿರ್ದೇಶಕರಿಗೆ ಕನ್ನಡಪರ ಸಂಘಟನೆಗಳ ಮುಖಂಡರು ಎಚ್ಚರಿಕೆ ನೀಡಿದ್ದಾರೆ.

ಕನ್ನಡಪರ ಹೋರಾಟಗಾರ ರೂಪೇಶ್ ರಾಜಣ್ಣ ಮತ್ತಿತರ ಮುಖಂಡರು ಚಲನಚಿತ್ರ ವಾಣಿಜ್ಯ ಮಂಡಳಿಗೆ ತೆರಳಿ ದೂರು ನೀಡಿ, ಸೋನು ನಿಗಮ್ ಅವರನ್ನು ಕನ್ನಡ ಚಿತ್ರರಂಗದಿಂದ ನಿಷೇಧಿಸಬೇಕೆಂದು ಆಗ್ರಹಿಸಿದ್ದಾರೆ. ಅವರ ವಿವಾದಿತ ಹೇಳಿಕೆಯಿಂದ ಕನ್ನಡದ ಮನಸ್ಸುಗಳಿಗೆ ತೀವ್ರ ನೋವಾಗಿದೆ. ಅವರು ಬಹಿರಂಗ ಕ್ಷಮೆ ಯಾಚಿಸಬೇಕು. ಅವರು ಕನ್ನಡಕ್ಕೆ ಯಾವ ರೀತಿ ಸೇವೆ ಸಲ್ಲಿಸಿದರೇನು ಪ್ರಯೋಜನ? ಈ ರೀತಿ ಮಾಡಿರುವ ಅವಮಾನವನ್ನು ನಾವು ಸಹಿಸಲು ಸಾಧ್ಯವಿಲ್ಲ ಎಂದು ಕಿಡಿಕಾರಿದ್ದಾರೆ.

ಕರವೇ ಅಧ್ಯಕ್ಷ ನಾರಾಯಣಗೌಡ ಮಾತನಾಡಿ, ಕನ್ನಡದ ಬಗ್ಗೆ ಅವಹೇಳನಕಾರಿಯಾಗಿ ಹೇಳಿಕೆ ನೀಡಿರುವ ಸೋನು ನಿಗಮ್ ಅವರ ಹೇಳಿಕೆ ಅತ್ಯಂತ ಬಾಲಿಶವಾಗಿದೆ. ಬಾಲಿವುಡ್‌ನಲಿ ಖಾಲಿ ಕುಳಿತಿದ್ದ ಸೋನು ನಿಗಮ್ ಅವರನ್ನು ಕರ್ನಾಟಕದಲ್ಲಿ ರತ್ನಗಂಬಳಿ ಹಾಸಿ ಕರೆದು ಆತಿಥ್ಯ ನೀಡಿದ್ದಕ್ಕೆ ಈ ರೀತಿ ಅವಮಾನ ಮಾಡಿ ಕನ್ನಡಿಗರ ಸ್ವಾಭಿಮಾನಕ್ಕೆ ಧಕ್ಕೆ ತಂದಿದ್ದಾರೆ.ಕನ್ನಡಿಗರನ್ನು ಭಯೋತ್ಪಾದಕರಿಗೆ ಹೋಲಿಸಿ ಅವಮಾನ ಮಾಡಿರುವುದನ್ನು ಯಾರೂ ಸಹಿಸಲು ಸಾಧ್ಯವಿಲ್ಲ. ಕೂಡಲೇ ಅವರನ್ನು ಕನ್ನಡ ಚಿತ್ರರಂಗದಿಂದ ನಿಷೇಧ ಮಾಡಬೇಕು. ಯಾವುದೇ ಕಾರಣಕ್ಕೂ ಅವರಿಗೆ ಮುಂದಿನ ದಿನಗಳಲ್ಲಿ ಅವಕಾಶ ನೀಡಲೇ ಬಾರದು ಎಂದು ಆಗ್ರಹಿಸಿದ್ದಾರೆ.

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪುರುಷೋತ್ತಮ್ ಬಿಳಿಮಲೆ ಅವರು, ಸೋನು ನಿಗಮ್ ಅವರ ವರ್ತನೆ ಖಂಡಿಸಿ, ಸೋನು ನಿಗಮ್ ಕನ್ನಡಿಗರ ಕ್ಷಮೆಯಾಚಿಸಬೇಕು.ಇಲ್ಲವೇ ಕರ್ನಾಟಕಕ್ಕೆ ಬರುವುದನ್ನು ನಿಲ್ಲಿಸಬೇಕು. ಕನ್ನಡ ಭಾಷೆಗೂ ಪಹಲ್ಗಾಮ್‌ನ ಭಯೋತ್ಪಾದನೆ ಘಟನೆಗೂ ತಳಕು ಹಾಕುವುದು ಎಷ್ಟು ಸಮಂಜಸ ಎಂದು ಕಿಡಿಕಾರಿದ್ದಾರೆ.ಇದೇ ರೀತಿ ಹಲವು ಕನ್ನಡಪರ ಹೋರಾಟಗಾರರು ವಿವಿಧ ಕನ್ನಡಪರ ಸಂಘಟನೆಗಳ ಮುಖಂಡರು ಸೋನು ನಿಗಮ್ ವರ್ತನೆ ಖಂಡಿಸಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

## ಕ್ಷಮೆ ಕೇಳಬೇಕು: ಜೆಡಿಎಸ್ ಒತ್ತಾಯ

ಕನ್ನಡವನ್ನು ಪಹಲ್ಗಾಮ್ ಘಟನೆಗೆ ಸಂಬಂಧ ಕಲ್ಪಿಸಿ, ಕನ್ನಡಿಗರನ್ನು ಕೆಣಕಿರುವ ಗಾಯಕ ಸೋನು ನಿಗಮ್ ಕನ್ನಡಿಗರ ಕ್ಷಮೆ ಕೇಳಲೇಬೇಕು ಎಂದು ಜೆಡಿಎಸ್ ಒತ್ತಾಯಿಸಿದೆ.

ಈ ಸಂಬಂಧ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿರುವ ಜೆಡಿಎಸ್, ಕನ್ನಡ ಭಾಷಾಭಿಮಾನವನ್ನು ಅವಮಾನಿಸಿದ ಗಾಯಕ ಸೋನು ನಿಗಮ್ ನಿಮಗೆ ಧಿಕ್ಕಾರವಿರಲಿ. ಕನ್ನಡ ಹಾಡು ಹಾಡಿ ಎಂದು ಕೇಳಿದ್ದಕ್ಕೆ, ಕನ್ನಡದ ಮೇಲಿನ ನಮ ಅಭಿಮಾನವನ್ನು ಪಹಲ್ಗಾಮ್ ಉಗ್ರರ ದಾಳಿಗೆ ಹೋಲಿಕೆ ಮಾಡಿದ್ದು ಖಂಡನೀಯ. ಇದನ್ನು ಕನ್ನಡಿಗರು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ ಎಂದು ತೀಕ್ಷ್ಣವಾಗಿ ಪ್ರತಿಕ್ರಿಯಿಸಿದೆ. ಕನ್ನಡಾಭಿಮಾನವನ್ನು ಪಹಲ್ಗಾಮ್ ಘಟನೆಗೆ ಕಲ್ಪಿಸಿದ ನಿಮದು ಉಗ್ರಗಾಮಿ ಮನಸ್ಥಿತಿ.. ಬೆಂಗಳೂರಿನಲ್ಲಿ ನಡೆದ ಕಾರ್ಯಕ್ರಮದಲ್ಲಿ ಕನ್ನಡದ ಹಾಡನ್ನು ಹಾಡುವಂತೆ ಕೇಳಿದರೆ ಅದು ತಪ್ಪೆ? ಎಂದು ಪ್ರಶ್ನಿಸಿದೆ.

ಸೋನು ನಿಗಮ್ ನೀವು ಕನ್ನಡ ಭಾಷೆಯಲ್ಲಿ ಹಾಡು ಹಾಡಿದ್ದಕ್ಕೆ ಕರ್ನಾಟಕದಲ್ಲಿ ಮನೆ ಮಾತಾಗಿದ್ದೀರಿ, ಪ್ರಖ್ಯಾತಿಯನ್ನು ಪಡೆದಿದ್ದು ಎಂಬುದನ್ನು ಮರೆತುಬಿಟ್ಟಿರಾ? ಕೋಟ್ಯಂತರ ಕನ್ನಡಿಗರು, ಅಭಿಮಾನಿಗಳು ನಿಮನ್ನು ಆರಾಧಿಸುತ್ತಾ ಪ್ರೀತಿ ಕೊಟ್ಟಿದ್ದಾರೆ. ಆದರೆ ನೀವು ಕನ್ನಡದ ಮನಸ್ಸುಗಳನ್ನು, ಅಭಿಮಾನಿಗಳನ್ನು ಅವಮಾನಿಸಿ, ನೋಯಿಸಿದ್ದೀರಿ, ಅವರ ನಂಬಿಕೆ ಮತ್ತು ವಿಶ್ವಾಸಕ್ಕೆ ದ್ರೋಹ ಬಗೆದಿದ್ದೀರಿ ಎಂದು ಜೆಡಿಎಸ್ ವಾಗ್ದಾಳಿ ನಡೆಸಿದೆ.

# ಗೋವಾ : ದೇಗುಲದಲ್ಲಿ ಕಾಲ್ತುಳಿತ 6 ಸಾವು

**ಪಣಜಿ,ಮೇ.4––** ಗೋವಾದ ಶ್ರೀಗಾರ್ಂವ್ ಗ್ರಾುದಲ್ಲಿರುವ ಶ್ರೀಲೈರೈ ದೇವಾಲಯದಲ್ಲಿ ಕಾಲ್ತುಳಿತದಿಂದ 6 ಮಂದಿ ಮೃತಪಟ್ಟು, 50ಕ್ಕೂ ಹೆಚ್ಚು ಮಂದಿ ಗಾಯಗೊಂಡಿರುವ ಘಟನೆ ಇಂದು ಬೆಳಗಿನ ಜಾವ ನಡೆದಿದೆ.



ಪಣಜಿಯಿಂದ ಸುಮಾರು 40 ಕಿ.ಮೀ ದೂರದಲ್ಲಿರುವ ಶ್ರೀಗಾರ್ಂವ್ ಗ್ರಾುದಲ್ಲಿರುವ ಶ್ರೀಲೈರೈ ದೇವಾಲಯದಲ್ಲಿ ಇಂದು ಬೆಳಗಿನ ಜಾವ 3 ಗಂಟೆ ಘಟನೆ ನಡೆದಿದೆ.

ದೇಗುಲದ ವಾರ್ಷಿಕ ಉತ್ಸವ ಹಿನ್ನೆಲೆಯಲ್ಲಿ ಕನಿಷ್ಠ 30 ರಿಂದ 40 ಸಾವಿರ ಜನ ಸೇರಿದ್ದು, ಕೆಲವರು ಇಳಿಜಾರಿನಲ್ಲಿ ನಿಂತಿದ್ದರು. ಆಗ ಹಠಾತ್ತಾಗಿ ನೂಕು ನುಗ್ಗಲು ಉಂಟಾಗಿ 40 ರಿಂದ 50 ಮಂದಿ ಒಬ್ಬರ ಮೇಲೆ ಒಬ್ಬರು ಬಿದ್ದಿದ್ದರಿಂದ ಕಾಲ್ತುಳಿತ ನಡೆದಿದೆ.

ಈ ಘಟನೆಯಲ್ಲಿ 6 ಮಂದಿ ಅಸುನೀಗಿದ್ದು, 30ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ ಎಂದು ಗೋವಾದ ಪೊಲೀಸ್ ಮಹಾನಿರ್ದೇಶಕ ಅಲೋಕ್‌ಕುಮಾರ್ ತಿಳಿಸಿದ್ದಾರೆ.

ಉತ್ತರ ಗೋವಾದಲ್ಲಿರುವ ಈ ದೇವಾಲಯದಲ್ಲಿ ನಡೆಯುವ ವಾರ್ಷಿಕ ಉತ್ಸವಕ್ಕೆ ಗೋವಾ ಅಲ್ಲದೆ ಮಹಾರಾಷ್ಟ್ರ ಮತ್ತು ಕರ್ನಾಟಕದಿಂದಲೂ ಸಾವಿರಾರು ಭಕ್ತರು ಭಾಗವಹಿಸುತ್ತಾರೆ.

ಹಠಾತ್ ಜನಜಂಗುಳಿ ಮತ್ತು ಅವ್ಯವಸ್ಥೆಯಿಂದ ಈ ಘಟನೆ ನಡೆದಿದೆ. ಗಾಯಗೊಂಡವರನ್ನು ಚಿಕಿತ್ಸೆಗೆ ಸ್ಥಳೀಯ ಆಸ್ಪತ್ರೆಗಳಿಗೆ ದಾಖಲು ಮಾಡಲಾಗಿದ್ದು, ಘಟನೆ ನಡೆದ ತಕ್ಷಣವೇ ರಕ್ಷಣಾ ಮತ್ತು ಪರಿಹಾರ ಕಾರ್ಯಾಚರಣೆಯನ್ನು ಆರಂಭಿಸಿ ಗಾಯಾಳುಗಳನ್ನು ರಕ್ಷಿಸಲಾಗಿದೆ ಎಂದು ಉತ್ತರ ಗೋವಾ ಪೊಲೀಸ್ ವರಿಷ್ಠಾಧಿಕಾರಿ ಅಕ್ಷತ್ ಕೌಶಲ್ ತಿಳಿಸಿದ್ದಾರೆ.

ಕಾಲ್ತುಳಿತಕ್ಕೆ ನಿಖರ ಕಾರಣಗಳನ್ನು ಅಧಿಕಾರಿಗಳು ಇನ್ನೂ ದೃಢಪಡಿಸಿಲ್ಲ. ಜನ ದಟ್ಟಣೆ ಮತ್ತು ನೂಕುನುಗ್ಗಲಿನಿಂದ ಕಾಲ್ತುಳಿತ ನಡೆದಿದೆ ಎಂದು ಪ್ರಾಥಮಿಕ ಮಾಹಿತಿಗಳು ತಿಳಿಸಿವೆ.

ತನಿಖೆಗೆ ಗೋವಾ ಮುಖ್ಯಮಂತ್ರಿ ಸೂಚನೆ, ಗಾಯಾಳುಗಳಿಗೆ ಸಾಂತ್ವನ ಗೋವಾದ ಮುಖ್ಯಮಂತ್ರಿ ಪ್ರಮೋದ್ ಸಾವಂತ್ ಅವರು ಈ ಘಟನೆಯ ಬಗ್ಗೆ ದುಃಖ ವ್ಯಕ್ತಪಡಿಸಿದ್ದು, ಈ ಘಟನೆಯ ಬಗ್ಗೆ ತನಿಖೆಗೆ ಆದೇಶಿಸಿರುವ ಅವರು ಮುಂದೆ ಇಂತಹ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕೆ ವಹಿಸಲಾಗುವುದು ಎಂದು ಹೇಳಿದ್ದಾರೆ.

ಇಂದು ಬೆಳಿಗ್ಗೆ ಗಾಯಾಳುಗಳು ದಾಖಲಾಗಿರುವ ಆಸ್ಪತ್ರೆಗೆ ಭೇಟಿ ನೀಡಿ ಗಾಯಾಳುಗಳ ಯೋಗಕ್ಷೇಮ ವಿಚಾರಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಘಟನೆಯ ಬಗ್ಗೆ ವಿವರವಾದ ತನಿಖೆ ನಡೆಸುವಂತೆ ಸೂಚಿಸಿದ್ದೇನೆ. ಹಾಗೆಯೇ ತನಿಖಾ ವರದಿಯನ್ನು ಬಹಿರಂಗಪಡಿಸಲಾಗುವುದು ಎಂದಿದ್ದಾರೆ.

ಇಂದು ಬೆಳಿಗ್ಗೆ ಶ್ರೀಗಾರ್ಂವ್‌ನ ದೇಗುಲದಲ್ಲಿ ಸಂಭವಿಸಿದ ಕಾಲ್ತುಳಿತದಿಂದ ತೀವ್ರ ದುಃಖಿತನಾಗಿದ್ದೇನೆ. ಗಾಯಾಳುಗಳ ಯೋಗಕ್ಷೇಮ ವಿಚಾರಿಸಲು ನಾನು ಆಸ್ಪತ್ರೆಗೆ ಭೇಟಿ ನೀಡಿದ್ದೇನೆ, ಸಂತ್ರಸ್ಥ ಕುಟುಂಬಗಳಿಗೆ ಸಾಧ್ಯವಿರುವ ಅಗತ್ಯ ನೆರವನ್ನು ನೀಡಲಾಗುವುದು. ಪ್ರಧಾನಿ ಮೋದಿ ಅವರು ನನ್ನೊಂದಿಗೆ ಮಾತನಾಡಿ ಪರಿಸ್ಥಿತಿ ಬಗ್ಗೆ ಮಾಹಿತಿ ಪಡೆದರು. ಈ ಸಂಕಷ್ಟದ ಸಮಯದಲ್ಲಿ ಸಂಪೂರ್ಣ ಬೆಂಬಲ ನೀಡುವುದಾಗಿ ಭರವಸೆ ನೀಡಿದ್ದಾರೆ ಎಂದು ಗೋವಾ ಮುಖ್ಯಮಂತ್ರಿ ಪ್ರಮೋದ್ ಸಾವಂತ್ ಎಕ್ಸ್‌ನಲ್ಲಿ ತಿಳಿಸಿದ್ದಾರೆ.

8 ಮಂದಿ ಸ್ಥಿತಿ ಗಂಭೀರ: ಈ ಕಾಲ್ತುಳಿತದಲ್ಲಿ ಕನಿಷ್ಟ 30 ಮಂದಿ ಗಾಯಗೊಂಡಿದ್ದು, ಅವರಲ್ಲಿ 8 ಮಂದಿಯ ಸ್ಥಿತಿ ಗಂಭೀರವಾಗಿದೆ ಎಂದು ಗೋವಾ ಆರೋಗ್ಯ ಸಚಿವ ವಿಶ್ವಜಿತ್ ರಾಣೆ ತಿಳಿಸಿದ್ದಾರೆ.

ಈ ಘಟನೆಯ ಮಾಹಿತಿ ತಿಳಿದ ತಕ್ಷಣವೇ 5 ಆಂಬ್ಯೂಲೆನ್ಸ್‌ಗಳನ್ನು ಘಟನಾ ಸ್ಥಳಕ್ಕೆ ರವಾನಿಸಲಾಗಿದೆ. 3 ಆಂಬ್ಯೂಲೆನ್ಸ್‌ಗಳು ಉತ್ತರ ಗೋವಾ ಜಿಲ್ಲಾಸ್ಪತ್ರೆಯಲ್ಲಿ ಸನ್ನದ್ಧವಾಗಿರಿಸಲಾಗಿದೆ. ಪರಿಸ್ಥಿತಿಯನ್ನು ನಿಭಾಯಿಸಲು ಹೆಚ್ಚುವರಿ ವೈದ್ಯರನ್ನು ನಿಯೋಜಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಪ್ರಧಾನಿ ಶೋಕ: ಗೋವಾದ ದೇಗುಲದಲ್ಲಿ ಕಾಲ್ತುಳಿತದಿಂದ 6 ಮಂದಿ ಮೃತಪಟ್ಟಿರುವ ಘಟನೆಯ ಬಗ್ಗೆ ಪ್ರಧಾನಿ ಮೋದಿ ಅವರು ದುಃಖ ವ್ಯಕ್ತಪಡಿಸಿದ್ದು, ಮೃತಪಟ್ಟ ಕುಟುಂಬವರಿಗೆ ಸಂತಾಪ ಸೂಚಿಸಿ ಮೃತರ ಕುಟುಂಬಗಳಿಗೆ ಸಾಂತ್ವನ ಹೇಳಿದ್ದಾರೆ.

ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಟ್ವೀಟ್‌ಮಾಡಿರುವ ಪ್ರಧಾನಿ ಮೋದಿ ಅವರು, ಗಾಯಾಳುಗಳು ಬೇಗ ಗುಣಮುಖರಾಗಲಿ ಎಂದು ಹೇಳಿ ಗಾಯಾಳುಗಳಿಗೆ ಸೂಕ್ತ ಚಿಕಿತ್ಸೆ ಕೊಡಿಸುವ ವ್ಯವಸ್ಥೆಯನ್ನು ಮಾಡುವಂತೆ ಗೋವಾ ಸರ್ಕಾರಕ್ಕೆ ಸೂಚಿಸಿದ್ದಾರೆ.

ಘಟನೆಗೆ ಕಾರಣ: ಗೋವಾದ ದೇಗುಲದಲ್ಲಿ ಸಂಭವಿಸಿದ ಕಾಲ್ತುಳಿತದ ಘಟನೆಗೆ ನಿಖರ ಕಾರಣ ಬಹಿರಂಗವಾಗಿಲ್ಲವಾದರೂ ಭಕ್ತರೊಬ್ಬರಿಗೆ ವಿದ್ಯುತ್ ಶಾಕ್‌ಹೊಡೆದ ಪರಿಣಾಮ ನೂಕುನುಗ್ಗಲು ಉಂಟಾಯಿತು. ಈ ವೇಳೆ ಆತಂಕಗೊಂಡಭಕ್ತರು ಸುರಕ್ಷಿತ ಸ್ಥಳಗಳಿಗೆ ತೆರಳಲು ಯತ್ನಿಸಿದ್ದರಿಂದ ಕಾಲ್ತುಳಿತ ಉಂಟಾಯಿತು ಎಂದು ಸ್ಥಳದಲ್ಲಿದ್ದ ಭಕ್ತರೊಬ್ಬರು ತಿಳಿಸಿದ್ದಾರೆ.

# ನೈಸ್ ರಸ್ತೆಯಲ್ಲಿ ವಕೀಲ ಜಗದೀಶ್ ಬರ್ಬರ ಕೊಲೆ

ಬೆಂಗಳೂರು,ಮೇ 3–ನಗರದ ಹೊರವಲಯದ ನೈಸ್ ರಸ್ತೆಯಲ್ಲಿ ವಕೀಲರೊಬ್ಬರನ್ನು ಬರ್ಬರವಾಗಿ ಹತ್ಯೆ ಮಾಡಲಾಗಿದೆ.ಕೆಂಗೇರಿಯ ಎಸ್‌ಎಂವಿ ಲೇಔಟ್ ನಿವಾಸಿ ಜಗದೀಶ್ (46) ಕೊಲೆಯಾಗಿರುವ ವಕೀಲರು.ಜಗದೀಶ್ ಅವರು ತಮ ಕೀಯಾ ಸೇಲ್ಟೋಸ್ ಕಾರು ತೆಗೆದುಕೊಂಡು ಹೊರಗೆ ಹೋಗಿದ್ದು ರಾತ್ರಿ 7.30 ರಿಂದ 8 ಗಂಟೆ ಮಧ್ಯೆ ಮನೆಗೆ ಹಿಂದಿರುಗುತ್ತಿದ್ದರು.



ಕೆಂಗೇರಿಯ ಸಿವಿ ರಾಮನ್ ಎಸ್ಟೇಟ್ ಪಕ್ಕದ ನೈಸ್ ರಸ್ತೆಯಲ್ಲಿ ಜಗದೀಶ್ ರವರ ಕಾರು ಚಲಿಸುತ್ತಿದ್ದಾಗ ದುಷ್ಕರ್ಮಿಗಳು ಅವರ ಕಾರನ್ನು ಹಿಂಬಾಲಿಸಿಕೊಂಡು ಹೋಗಿ ಯಾವುದೋ ವಾಹನದಿಂದ ಕಾರಿಗೆ ಡಿಕ್ಕಿ ಹೊಡೆಸಿದ್ದಾರೆ. ಆ ವೇಳೆ ಜಗದೀಶ್ ಅವರು ಕಾರಿನಿಂದ ಇಳಿದು ಹೊರಗೆ ಬಂದು ಏನಾಯಿತೆಂದು ಕಾರನ್ನು ನೋಡುತ್ತಿದ್ದಾಗ ಅದೇ ಸಮಯಕ್ಕಾಗಿ ಕಾದಿದ್ದ ದುಷ್ಕರ್ಮಿಗಳು ಅವರ ಮೇಲೆ ಮಾರಕಾಸಗಳಿಂದ ಹಲ್ಲೆಗೆ ಯತ್ನಿಸಿದ್ದಾರೆ.ತಕ್ಷಣ ಜಗದೀಶ್ ಅವರಿಗೆ ತನ್ನ ಮೇಲೆ ಅಟ್ಯಾಕ್ ಮಾಡುತ್ತಿದ್ದಾರೆಂದು ಅರಿತು ಕಾರನ್ನು ಸ್ಥಳದಲ್ಲೆ ಬಿಟ್ಟು ತಪ್ಪಿಸಿಕೊಳ್ಳಲು ಯತ್ನಿಸಿದ್ದಾರೆ. ಆದರೂ ಬಿಡದ ದುಷ್ಕರ್ಮಿಗಳು 150 ಮೀಟರ್ ದೂರ ಅಟ್ಟಾಡಿಸಿಕೊಂಡು ಹೋಗಿ ನಡು ರಸ್ತೆಯಲ್ಲಿ ಮಾರಕಾಸಗಳಿಂದ ತಲೆಗೆ ಬಲವಾಗಿ ಹೊಡೆದು ಭೀಕರವಾಗಿ ಕೊಲೆ ಮಾಡಿ ಪರಾರಿಯಾಗಿದ್ದಾರೆ. ರಾತ್ರಿ10.30ರ ಸುಮಾರಿನಲ್ಲಿ ಜಗದೀಶ್ ಕೊಲೆಯಾಗಿರುವುದನ್ನು ತಿಳಿದು ಸಂಬಂಧಿ ಹರ್ಷ ಎಂಬುವವರು ತಕ್ಷಣ ಸೋದರ ಸಂಬಂಧಿ ಡಾ.ಪ್ರಭಂಜನ್ ಎಂಬುವವರಿಗೆ ದೂರವಾಣಿ ಕರೆ ಮಾಡಿ ವಿಷಯ ತಿಳಿಸಿದ್ದಾರೆ.

ಡಾ.ಪ್ರಭಂಜನ್ ರವರು ತಕ್ಷಣ ನೈಸ್ ರಸ್ತೆಯ ಸ್ಥಳಕ್ಕೆ ಹೋಗಿ ನೋಡಿದಾಗ ಜಗದೀಶ್ ಅವರ ಕಾರು ಪತ್ತೆಯಾಗಿದೆ. ಆದರೆ ಜಗದೀಶ್ ಕಾರಿನಲ್ಲಿ ಇರಲಿಲ್ಲ.ಕಾರಿನ ಎಡ ಮತ್ತು ಬಲ ಭಾಗದಲ್ಲಿ ಜಖಂಗೊಂಡಿದ್ದಲ್ಲದೆ ಕಾರಿನ ಪಾರ್ಕಿಂಗ್ ಲೈಟ್ ಹಾಗೂ ಕಾರು ಆನ್‌ನಲ್ಲಿದ್ದು, ಕಾರಿನ ನಾಲ್ಕು ಡೋರ್‌ಲಾಕ್ ಆಗಿರುವುದು ಕಂಡು ಬಂದಿದೆ. ಸ್ವಲ್ಪ ದೂರ ಹೋಗುತ್ತಿದ್ದಂತೆ ಸುಮಾರು 150 ಮೀಟರ್ ಅಂತರದಲ್ಲಿ ಜಗದೀಶ್ ಅವರ ಮೃತದೇಹ ಪತ್ತೆಯಾಗಿದೆ. ತಲೆಯ ಮಧ್ಯಭಾಗದಲ್ಲಿ ತೀವ್ರವಾಗಿ ಪೆಟ್ಟು ಬಿದ್ದಿದ್ದು, ಎಡಕಾಲು ಮತ್ತು ಹೊಟ್ಟೆಯ ಭಾಗದಲ್ಲಿ ತೆರಚಿದ ಗಾಯವಾಗಿದ್ದು, ತಲೆಯ ಹಿಂಭಾಗ ಸಂಪೂರ್ಣ ತೆರೆದುಕೊಂಡು ಮೆದುಳು ಹೊರ ಬಂದಿರುವುದು ಕಂಡು ಬಂದಿದೆ. ಈ ನಡುವೆ ಜಗದೀಶ್ ಅವರು ಬಳಸುತ್ತಿದ್ದ ಮೊಬೈಲ್ ಸಹ ನಾಪತ್ತೆಯಾಗಿದೆ. ತಕ್ಷಣ ಡಾ.ಪ್ರಭಂಜನ್ ರವರು ಕೆಂಗೇರಿ ಪೊಲೀಸ್ ಠಾಣೆಗೆ ವಿಷಯ ತಿಳಿಸಿದ್ದಾರೆ. ಸುದ್ದಿ ತಿಳಿದು ಸ್ಥಳಕ್ಕೆ ಆಗಮಿಸಿದ ಪೊಲೀಸರು ಪರಿಶೀಲನೆ ನಡೆಸಿ ಜಗದೀಶ್ ರವರ ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ರವಾನಿಸಿದ್ದಾರೆ.

ಡಾ.ಪ್ರಭಂಜನ್ ರವರು ಪೊಲೀಸರಿಗೆ ದೂರು ನೀಡಿದ್ದು, ಸಂಬಂಧಿ ಜಗದೀಶ್ ಅವರನ್ನು ಯಾರೋ ಅಪರಿಚಿತರು ಕೊಲೆ ಮಾಡುವ ಉದ್ದೇಶದಿಂದ ಅವರ ಕಾರಿಗೆ ಅಪಘಾತ ಮಾಡಿ, ಅವರು ಕೆಳಗೆ ಇಳಿಯುವಂತೆ ಮಾಡಿ ನಂತರ ಯಾವುದೋ ಆಯುಧದಿಂದ ಕೊಲೆ ಮಾಡಿದ್ದು, ಆರೋಪಿಗಳನ್ನು ಪತ್ತೆಹಚ್ಚಿ ಸೂಕ್ತ ಕಾನೂನು ಕ್ರಮ ಜರುಗಿಸಬೇಕೆಂದು ದೂರಿನಲ್ಲಿ ವಿವರಿಸಿದ್ದಾರೆ.ಕೆಂಗೇರಿ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಆರೋಪಿಗಳ ಬಂಧನಕ್ಕೆ ಶೋಧ ನಡೆಸುತ್ತಿದ್ದಾರೆ.

# ಗುಜರಾತ್‌ನಲ್ಲಿ 3.4 ತೀವ್ರತೆಯ ಭೂಕಂಪನ

**ಅಹಮದಾಬಾದ್, ಮೇ 4:** ಉತ್ತರ ಗುಜರಾತ್‌ನಲ್ಲಿ ಇಂದು ಮುಂಜಾನೆ 3.4 ತೀವ್ರತೆಯ ಭೂಕಂಪನ ಸಂಭವಿಸಿದೆ ಎಂದು ಭೂಕಂಪಶಾಸ್ತ್ರ ಸಂಶೋಧನಾ ಸಂಸ್ಥೆ (ಐಎಸ್‌ಆರ್) ತಿಳಿಸಿದೆ. ಜಿಲ್ಲಾಡಳಿತದ ಪ್ರಕಾರ, ಯಾವುದೇ ಸಾವುನೋವು ಅಥವಾ ಆಸ್ತಿಪಾಸ್ತಿ ಹಾನಿಯ ಬಗ್ಗೆ ವರದಿಯಾಗಿಲ್ಲ.ಬನಸ್ಕಾಂತ ಜಿಲ್ಲೆಯ ವಾವ್ ಬಳಿ ಮುಂಜಾನೆ 3.35 ಕ್ಕೆ ಭೂಕಂಪದ ಕೇಂದ್ರಬಿಂದು ದಾಖಲಾಗಿದೆ ಎಂದು ಐಎಸ್‌ಆರ್ ತನ್ನ ಇತ್ತೀಚಿನ ವರದಿಯಲ್ಲಿ ತಿಳಿಸಿದೆ.

ವಾವ್‌ನಿಂದ ಪೂರ್ವ–ಈಶಾನ್ಯಕ್ಕೆ (ಇಎನ್‌ಇ) 27 ಕಿ.ಮೀ ದೂರದಲ್ಲಿ 4.9 ಕಿ.ಮೀ ಆಳದಲ್ಲಿ ಭೂಕಂಪನ ದಾಖಲಾಗಿದೆ ಎಂದು ಗಾಂಧಿನಗರ ಮೂಲದ ಸಂಸ್ಥೆ ತಿಳಿಸಿದೆ. ಗುಜರಾತ್ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ (ಜಿಎಸ್ಡಿಎಂಎ) ಪ್ರಕಾರ, ಗುಜರಾತ್ ಹೆಚ್ಚಿನ ಭೂಕಂಪ–ಅಪಾಯದ ಪ್ರದೇಶವಾಗಿದ್ದು, ಕಳೆದ 200 ವರ್ಷಗಳಲ್ಲಿ ಒಂಬತ್ತು ಪ್ರಮುಖ ಭೂಕಂಪಗಳಿಗೆ ತುತ್ತಾಗಿದೆ.



ಜನವರಿ 26, 2001 ರಂದು ಕಚ್‌ನಲ್ಲಿ ಸಂಭವಿಸಿದ ಭೂಕಂಪವು ಕಳೆದ ಎರಡು ಶತಮಾನಗಳಲ್ಲಿ ಭಾರತದಲ್ಲಿ ಮೂರನೇ ಅತಿದೊಡ್ಡ ಮತ್ತು ಎರಡನೇ ಅತ್ಯಂತ ವಿನಾಶಕಾರಿಯಾಗಿದೆ ಎಂದು ಜಿಎಸ್ಡಿಎಂಎ ತಿಳಿಸಿದೆ. ಭೂಕಂಪದಲ್ಲಿ ಜಿಲ್ಲೆಯ ಹೆಚ್ಚಿನ ಸಂಖ್ಯೆಯ ಪಟ್ಟಣಗಳು ಮತ್ತು ಗ್ರಾಮಗಳು ಬಹುತೇಕ ಸಂಪೂರ್ಣ ನಾಶವಾಗಿದ್ದು, ಸುಮಾರು 13.800 ಜನರು ಸಾವನ್ನಪ್ಪಿದ್ದಾರೆ ಮತ್ತು 1.67 ಲಕ್ಷ ಜನರು ಗಾಯಗೊಂಡಿದ್ದಾರೆ ಎಂದು ವರದಿಯಾಗಿದೆ.

# ಪಾಕ್‌ನಿಂದ ಎಲ್ಲಾ ಆಮದು ಭಾರತ ನಿಷೇಧ



**ನವದೆಹಲಿ,ಮೇ4:** ಪಹಲ್ಗಾಮ್ ಭಯೋತ್ಪಾದಕ ದಾಳಿಯ ಬಗ್ಗೆ ಹೆಚ್ಚುತ್ತಿರುವ ಉದ್ವಿಗ್ನತೆಯ ಮಧ್ಯೆ ಭಾರತವು ನೆರೆಯ ದೇಶದಿಂದ ಎಲ್ಲಾ ಆಮದನ್ನು ನಿಷೇಧಿಸಿದೆ.

ರಾಷ್ಟ್ರೀಯ ಭದ್ರತೆ ಮತ್ತು ಸಾರ್ವಜನಿಕ ನೀತಿಯ ಹಿತದೃಷ್ಟಿಯಿಂದ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಸರ್ಕಾರ ಹೇಳಿದೆ, ಇದು ಪಾಕಿಸ್ತಾನದಿಂದ ಸಾಗಣೆಯಾಗುವ ಎಲ್ಲಾ ಉತ್ಪನ್ನಗಳಿಗೆ ಅನ್ವಯಿಸುತ್ತದೆ ಎಂದು ಒತ್ತಿಹೇಳಿದೆ.'ಪಾಕಿಸ್ತಾನದಿಂದ ಹುಟ್ಟುವ ಅಥವಾ ರಫ್ತು ಮಾಡುವ ಎಲ್ಲಾ ಸರಕುಗಳ ನೇರ ಅಥವಾ ಪರೋಕ್ಷ ಆಮದು ಅಥವಾ ಸಾಗಣೆಯನ್ನು, ಮುಕ್ತವಾಗಿ ಆಮದು ಮಾಡಿಕೊಳ್ಳಬಹುದಾದ ಅಥವಾ ಬೇರೆ ರೀತಿಯಲ್ಲಿ ಅನುಮತಿಸಲಾಗಿದ್ದರೂ, ಮುಂದಿನ ಆದೇಶದವರೆಗೆ ತಕ್ಷಣದಿಂದ ಜಾರಿಗೆ ಬರುವಂತೆ ನಿಷೇಧಿಸಲಾಗಿದೆ.

ರಾಷ್ಟ್ರೀಯ ಭದ್ರತೆ ಮತ್ತು ಸಾರ್ವಜನಿಕ ನೀತಿಯ ಹಿತದೃಷ್ಟಿಯಿಂದ ಈ ನಿರ್ಬಂಧವನ್ನು ವಿಧಿಸಲಾಗಿದೆ. ಈ ನಿಷೇಧಕ್ಕೆ ಯಾವುದೇ ವಿನಾಯಿತಿಗೆ ಭಾರತ ಸರ್ಕಾರದ ಪೂರ್ವಾನುಮತಿ ಅಗತ್ಯವಿರುತ್ತದೆ" ಎಂದು ವಾಣಿಜ್ಯ ಸಚಿವಾಲಯದ ಅಧಿಸೂಚನೆ ತಿಳಿಸಿದೆ

# ಗೋವಾ ಕಾಲ್ತುಳಿತದ ಬಗ್ಗೆ ತನಿಖೆ : ಸಿಎಂ ಸಾವಂತ್



**ಪಣಜಿ, ಮೇ 4:** ಉತ್ತರ ಗೋವಾದಲ್ಲಿ ಮುಂಜಾನೆ ಸಂಭವಿಸಿದ ಕಾಲ್ತುಳಿತದಲ್ಲಿ ಏಳು ಮಂದಿ ಸಾವನ್ನಪ್ಪಿದ ಘಟನೆಯ ಬಗ್ಗೆ ತನಿಖೆ ನಡೆಸಲಾಗುವುದು ಎಂದು ಗೋವಾ ಮುಖ್ಯಮಂತ್ರಿ ಪ್ರಮೋದ್ ಸಾವಂತ್ ಘೋಷಿಸಿದ್ದಾರೆ.

ಘಟನೆ ನಡೆದ ಕೆಲವೇ ಗಂಟೆಗಳ ನಂತರ ಸಾವಂತ್ ಶಿರ್ಗಾವ್ ಗ್ರಾಮದ ಶ್ರೀ ಲೈರ್ಪೆ ದೇವಿ ದೇವಸ್ಥಾನದಲ್ಲಿ ಕಾಲ್ತುಳಿತದ ಸ್ಥಳಕ್ಕೆ ಭೇಟಿ ನೀಡಿದರು. ಮುಂಜಾನೆ 3 ಗಂಟೆ ಸುಮಾರಿಗೆ ದೇವಾಲಯದ ವಾರ್ಷಿಕ ಉತ್ಸವದ ಸಮಯದಲ್ಲಿ ಕಾಲ್ತುಳಿತ ಸಂಭವಿಸಿದ ನಂತರ ಏಳು ಜನರು ಸಾವನ್ನಪ್ಪಿದ್ದಾರೆ ಮತ್ತು ಹಲವಾರು ಜನರು ಗಾಯಗೊಂಡಿದ್ದಾರೆ. ಸ್ಥಳದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಾವಂತ್, ಘಟನೆಯ ಬಗ್ಗೆ ವಿವರವಾದ ತನಿಖೆ ನಡೆಸುವಂತೆ ನಾನು ಕೇಳಿದ್ದೇನೆ. ನಾವು ವರದಿಯನ್ನು ಸಾರ್ವಜನಿಕಗೊಳಿಸುತ್ತೇವೆ ಎಂದು ಹೇಳಿದರು.

ಇಂತಹ ಘಟನೆಗಳನ್ನು ತಡೆಗಟ್ಟಲು ಭವಿಷ್ಯದಲ್ಲಿ ರಾಜ್ಯದ ಎಲ್ಲಾ ದೇವಾಲಯ ಉತ್ಸವಗಳಿಗೆ ಮುನ್ನೆಚ್ಚರಿಕೆಗಳನ್ನು ತೆಗೆದುಕೊಳ್ಳಲಾಗುವುದು ಎಂದು ಅವರು ಹೇಳಿದರು. ಕಾಲ್ತುಳಿತದ ಬಗ್ಗೆ ತಿಳಿದ ನಂತರ ಮುಂಜಾನೆ ಮಾಪುಸಾ ಪಟ್ಟಣದ ಉತ್ತರ ಗೋವಾ ಜಿಲ್ಲಾ ಆಸ್ಪತ್ರೆಗೆ ಭೇಟಿ ನೀಡಿದ್ದೇನೆ ಎಂದು ಸಾವಂತ್ ಹೇಳಿದರು. ಇದಕ್ಕೂ ಮುನ್ನ ಟ್ವೀಟ್ ಮಾಡಿದ್ದ ಸಾವಂತ್, ಪ್ರಧಾನಿ ನರೇಂದ್ರ ಮೋದಿ ಅವರಿಂದ ಕರೆ ಬಂದಿದ್ದು, ಅವರು ತಮ್ಮ ಸಂಪೂರ್ಣ ಬೆಂಬಲವನ್ನು ನೀಡಿದ್ದಾರೆ ಎಂದು ಹೇಳಿದ್ದಾರೆ.

# ವಿದೇಶಿ ಪ್ರವಾಸಕ್ಕೆ ಅಲಹಾಬಾದ್ ಹೈಕೋರ್ಟ್ ಬ್ರೇಕ್

**ಲಕ್ನೋ, ಮೇ.4–** ಜಾಮೀನು ಪಡೆದ ಆರೋಪಿಗೆ ಸಂಬಂಧಿಕರ ಮದುವೆ ಮತ್ತು ವಿರಾಮ ಪ್ರವಾಸದಲ್ಲಿ ಭಾಗವಹಿಸಲು ವಿದೇಶಕ್ಕೆ ಪ್ರಯಾಣಿಸಲು ಅನುಮತಿ ಪಡೆಯುವ ಅಂತರ್ಗತ ಹಕ್ಕಿಲ್ಲ ಎಂದು ಅಲಹಾಬಾದ್ ಹೈಕೋರ್ಟ್ ತೀರ್ಪು ನೀಡಿದೆ.

ವಿಚಾರಣಾಧೀನ ಆರೋಪಿಯು ವಿದೇಶಕ್ಕೆ ಪ್ರಯಾಣಿಸಲು ಸಂಬಂಧಿಕರ ಮದುವೆ ಮತ್ತು ಮತ್ತೊಂದು ದೇಶಕ್ಕೆ ಸಂತೋಷದ ಪ್ರವಾಸವನ್ನು ಅಗತ್ಯ ಕಾರಣಗಳಾಗಿ ಪರಿಗಣಿಸಲಾಗುವುದಿಲ್ಲ ಎಂದು ನ್ಯಾಯಾಲಯದ ಲಕ್ನೋ ಪೀಠ ಹೇಳಿದೆ. ಬರೇಲಿಯ ಶ್ರೀ ರಾಮ್ ಮೂರ್ತಿ ಸ್ಮಾರಕ್ ಇನ್ಸಿಟ್ಯೂಟ್ ಆಫ್ ಮೆಡಿಕಲ್ ಸೈನ್ಸ್‌ನ ಸಲಹೆಗಾರ ಆದಿತ್ಯ ಮೂರ್ತಿ ಸಲ್ಲಿಸಿದ್ದ ಅರ್ಜಿಯನ್ನು ವಜಾಗೊಳಿಸಿದ ನ್ಯಾಯಮೂರ್ತಿ ಸುಭಾಷ್ ವಿದ್ಯಾರ್ಥಿ ಈ



ತೀರ್ಪು ನೀಡಿದ್ದಾರೆ. ಮೂರ್ತಿ ಅವರು ತಮ್ಮ ಸಂಬಂಧಿಕರ ಮದುವೆಗಾಗಿ ಅಮೆರಿಕಕ್ಕೆ ಪ್ರಯಾಣಿಸಲು ಮತ್ತು ನಂತರ ಮೇ 3 ರಿಂದ 22 ರವರೆಗೆ ಸಂಬಂಧಿತ ಆಚರಣೆಗಾಗಿ ಫ್ರಾನ್ಸ್‌ಗೆ ಪ್ರಯಾಣಿಸಲು ಅನುಮತಿ ಕೋರಿದ್ದರು. ಜಾಮೀನಿನ ಮೇಲೆ ವಿಸ್ತರಿಸಲ್ಪಟ್ಟ ಆರೋಪಿ ವ್ಯಕ್ತಿಗೆ ವೈದ್ಯಕೀಯ ಚಿಕಿತ್ಸೆ, ಅಗತ್ಯ ಅಧಿಕೃತ ಕರ್ತವ್ಯಗಳಿಗೆ ಹಾಜರಾಗುವುದು ಮತ್ತು ಮುಂತಾದ ಕೆಲವು ತುರ್ತು ಅಗತ್ಯಗಳಿಗಾಗಿ ವಿದೇಶಕ್ಕೆ ಪ್ರಯಾಣಿಸಲು ಅನುಮತಿ ನೀಡಬಹುದು ಎಂದು ನ್ಯಾಯಪೀಠ ಸ್ಪಷ್ಟಪಡಿಸಿದೆ.

# ಪಹಲ್ಗಾಮ್ ದಾಳಿ ಕಹಿ ಘಟನೆಯ ನಡುವೆಯೂ ಕಾಶ್ಮೀರದಲ್ಲಿ ಶಂಕರ ಜಯಂತಿ ಆಚರಣೆ



**ಶ್ರೀನಗರ, ಮೇ.4–** ಪಹಲ್ಲಾಮ್ ದಾಳಿ ನಡುವೆಯೂ ಜಮ್ಮು–ಕಾಶ್ಮೀರದಲ್ಲಿ ಆದಿ ಶಂಕರಾಚಾರ್ಯರ ಜಯಂತಿ ಆಚರಿಸಲಾಗಿದೆ. ಸಿಆರ್‌ಪಿಎಫ್ ತಂಡದ ಸಹಾಯದಿಂದ ವಿಶೇಷ ಹೋಮ ನೆರವೇರಿಸಲಾಗಿದೆ. ಮೈಸೂರು ಮತ್ತು ಬೆಂಗಳೂರಿನಿಂದ ತೆರಳಿದ್ದ 13 ಜನರ ತಂಡ ಈ ವಿಶೇಷ ಪೂಜೆ ಮಾಡಿದೆ.

ಜಮ್ಮು ಕಾಶ್ಮೀರದಲ್ಲಿ ಶಾಂತಿ, ನೆಮ್ಮದಿ ನೆಲೆಸಲೆಂದು ಪ್ರಾರ್ಥಿಸಲಾಗಿದೆ. ದೇಶ ರಕ್ಷಣೆಗಾಗಿ ಯೋಧರಿಗೆ ಹೆಚ್ಚು ಆರೋಗ್ಯ ಶಕ್ತಿ ಸಿಗಲೆಂದು ಆಶಿಸಿ ರುದ್ರಾಭಿಷೇಕ, ಮೃತ್ಯುಂಜಯ ಜಪ ಮಾಡಲಾಗಿದೆ. ಜಮ್ಮು–ಕಾಶ್ಮೀರ ತಂಡದಿಂದ ವಿಶೇಷ ವಾದ್ಯಗೋಷ್ಠಿ ಕೂಡ ನಡೆಯಿತು. ಜಿಲ್ಲಾ ಆಡಳಿತದಿಂದ ವಿಶೇಷ ಪೂಜೆ, ಹೋಮ–ಹವನ ನಡೆದಿದೆ. ಡಾಕ್ಟರ್ ನಾಗಲಕ್ಷ್ಮಿ ನಾಗಾರ್ಜುನ್ ಮೈಸೂರು ತಂಡವು ಭರತನಾಟ್ಯದ ಮೂಲಕ ಶಂಕರಾಚಾರ್ಯ ಜೀವನ ಕಥೆಯನ್ನು ಪ್ರಸ್ತುತ ಪಡಿಸಿತು.

# ಡಾ.ಟಿಎಂಎ ಪೈ ಅವರು ನಿಜವಾದ ರಾಷ್ಟ್ರ ನಿರ್ಮಾತೃ : ನ್ಯಾಯಮೂರ್ತಿ ಎಸ್. ಅಬ್ದುಲ್ ನಜೀರ್



ಮಣಿಪಾಲ: ಮಣಿಪಾಲ್ ಸಂಸ್ಥಾಪಕರಾದ ಡಾ. ಬಹುಮುಖ ವ್ಯಕ್ತಿತ್ವ, ಶಿಕ್ಷಣ ಲೋಕೋಪಕಾರಿ ಮತ್ತು ನಿಜ ಆಗಿದ್ದರರು ಎಂದು ಆಂಧ್ರಪ್ರ ನಿವೃತ್ತ ನ್ಯಾಯಮೂರ್ತಿ ಅವರು ಬಣ್ಣಿಸಿದರು.

ಸಮೂಹ ಸಂಸ್ಥೆಗಳ ಟಿಎಂಎಪೈ ಅವರು ತಜ್ಞ, ಬ್ಯಾಂಕರ್, ವಾದ ರಾಷ್ಟ್ರ ನಿರ್ಮಾತೃ ದೇಶದ ರಾಜ್ಯಪಾಲರಾದ ಎಸ್. ಅಬ್ದುಲ್ ನಜೀರ್

ಮಣಿಪಾಲ್ ಸಮೂಹ ಡಾ. ಟಿಎಂಎ ಪೈ ಅವರ ಕಾರ್ಯಕ್ರಮದ ಮುಖ್ಯ ಅವರು, ಅನಕ್ಷರತೆ ಮತ್ತು

ಸಂಸ್ಥೆಗಳ ಸಂಸ್ಥಾಪಕರಾದ 127ನೇ ಜನ್ಮದಿನ ಆಚರಣೆ ಅತಿಥಿಯಾಗಿ ಪಾಲ್ಗೊಂಡಿದ್ದ ಅನಾರೋಗ್ಯವನ್ನು ನಿರ್ಮೂಲನೆ ಮಾಡುವ ಮೂಲಕ ಬಡತನವನ್ನು ನಿರ್ಮೂಲನೆ ಮಾಡಬಹುದು ಎಂಬುದು ಪೈ ಅವರ ಬಲವಾದ ನಂಬಿಕೆಯಾಗಿತ್ತು. ಡಾ. ಪೈ ಅವರು ನಿಜವಾದ ಕರ್ಮಾ ಯೋಗಿಯಾಗಿದ್ದರು. ವಿದ್ಯಾವಂತ ಮಕ್ಕಳು ಕೇವಲ ಕುಟುಂಬದ ಆಸ್ತಿ ಅಷ್ಟೇ ಅಲ್ಲದೆ, ಅವರು ಪ್ರಗತಿಶೀಲ ರಾಷ್ಟ್ರದ ನಿರ್ಮಾತೃವಾಗಿದ್ದರು ಎಂದರು. ಪೈ ಅವರು ಸ್ಥಾಪಿಸಿದ ಮೂಡುಬಿದಿರೆಯ ಮಹಾವೀರ ಕಾಲೇಜಿನ ಹೆಮ್ಮೆಯ ಹಳೆಯ ವಿದ್ಯಾರ್ಥಿ ನಾನು. ಅವರ ದೃಷ್ಟಿಕೋನ ನನ್ನ ಶೈಕ್ಷಣಿಕ ಪ್ರಯಾಣ ಮತ್ತು ವೃತ್ತಿ ಜೀವನವನ್ನು ರೂಪಿಸಿತು ಎಂದು ಅವರು ನೆನಪಿಸಿಕೊಂಡರು. ಮಾಹೆ ಪ್ರೊ. ಚಾನ್ಸಲರ್ ಡಾ. ಎಚ್.ಎಸ್. ಬಲ್ಲಾಳ್ ಅವರು ಮಾತನಾಡಿ, ನಮ್ಮ ಸಂಸ್ಥಾಪಕ ಡಾ. ಟಿಎಂಎ ಪೈ ಅವರದ್ದು ಅಸಾಧಾರಣ ದೂರದೃಷ್ಟಿತ್ವವುಳ್ಳ ವ್ಯಕ್ತಿತ್ವ. ಅವರು ಕೇವಲ ಒಂದು ಶಿಕ್ಷಣ ಸಂಸ್ಥೆಯನ್ನು ರೂಪಿಸಿಲ್ಲ, ಬದಲಿಗೆ ಶೈಕ್ಷಣಿಕ ಪರಿಸರವನ್ನು ನಿರ್ಮಿಸಿದ್ದಾರೆ. 1950ರ ದಶಕದಲ್ಲಿ ಸ್ವಂತ ಹಣದಲ್ಲಿ ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸುವುದು ಒಂದು ಕ್ರಾಂತಿಕಾರಿಕ ನಡೆ. ಇಂದು, ನಾವು ಅವರನ್ನು ಗೌರವಯುತವಾಗಿ ಸ್ಮರಿಸುತ್ತ, ಅವರ ತತ್ವಗಳಾದ ಗುಣಮಟ್ಟದ ಶಿಕ್ಷಣ, ನಾವೀನ್ಯತೆ ಮತ್ತು ಸಮಾಜ ಸೇವೆಗೆ ಬದ್ಧರಾಗಿರುತ್ತವೆ ಎನ್ನುವುದನ್ನು ನಮಗೆ ನಾವೇ ಜವಾಬ್ದಾರಿವಹಿಸಿಕೊಳ್ಳಬೇಕು ಎಂದರು.

ಮಾಹೆಯ ಉಪಕುಲಪತಿ ಲೆಫ್ಟಿನೆಂಟ್ ಜನರಲ್ (ಡಾ) ಎಂ.ಡಿ. ವೆಂಕಟೇಶ್ ಮಾತನಾಡಿ, ನಮ್ಮ ಸಂಸ್ಥಾಪಕರಾದ ಡಾ ಟಿಎಂಎ ಪೈ ಅವರ 127ನೇ ಜನ್ಮದಿನವನ್ನು ಆಚರಿಸುತ್ತಿರುವ ಈ ಸಮಯದಲ್ಲಿ, ನಮ್ಮ ಸಂಸ್ಥೆಯ ನಿರಂತರ ಮಾರ್ಗ ಸೂಚಿಯಾಗಿರುವ ಧ್ಯೇಯ ಮತ್ತು ದೂರದೃಷ್ಟಿತ್ವವನ್ನು ನಾವು ಪಾಲಿಸಬೇಕು. ಒಂದು ಶಿಕ್ಷಣ ಸಂಸ್ಥೆಯಿಂದ ಶುರುವಾಗಿ ಒಂದು ಸಮಗ್ರ ಶೈಕ್ಷಣಿಕ ಪರಿಸರವನ್ನು ಸೃಷ್ಟಿಸಿದ ಡಾ. ಪೈ ಅವರದ್ದು ಗಮನಾರ್ಹ ಪಯಣ. ಶಿಕ್ಷಣ ಎಲ್ಲರಿಗೂ ದೊರೆಯಬೇಕು ಎನ್ನುವುದು ಅವರ ಮೂಲ ನಂಬಿಕೆ. ವಿವಿಧ ಶೈಕ್ಷಣಿಕ ಕಾರ್ಯಕ್ರಮಗಳ ಮೂಲಕ ಅದನ್ನು ಸಾಕಾರಗೊಳಿಸಲು ನಾವೆಲ್ಲ ನಿರಂತರ ಶ್ರಮಿಸಬೇಕು ಎಂದು ಹೇಳಿದರು. ಮಣಿಪಾಲ ಅಕಾಡೆಮಿ ಆಫ್ ಹೈಯರ್ ಎಜುಕೇಶನ್ ಟ್ರಸ್ಟ್‌ನ ಟ್ರಸ್ಟಿ ವಸಂತಿ ಆರ್.ಪೈ,ಮಾಹೆ ಟ್ರಸ್ಟ್ ಅಧ್ಯಕ್ಷರಾದ ಡಾ. ರಂಜನ್ ಪೈ, ಡಾ. ಟಿಎಂಎ ಪೈ ಫೌಂಡೇಶನ್ ಅಧ್ಯಕ್ಷ ಟಿ. ಅಶೋಕ್ ಪೈ, ಮಣಿಪಾಲ್ ಮೀಡಿಯಾ ನೆಟ್‌ವರ್ಕ್ ಕಾರ್ಯಾಧ್ಯಕ್ಷ, ಟಿ. ಸತೀಶ್ ಯು ಪೈ, ಮಣಿಪಾಲ್ ಗ್ರೂಪ್‌ನ ವಿವಿಧ ಹಿರಿಯ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

# ಮೋಸ ಹೋದವರ ಕಥೆ ಉದಯ ಸೂರ್ಯ ಟ್ರೈಲರ್ ಬಿಡುಗಡೆ




ಪ್ರೀತಿಯಲ್ಲಿ ಮೋಸ ಹೋದ ಸ್ನೇಹಿತರ ಕಥಾಹಂದರದ 'ಉದಯ ಸೂರ್ಯ' ಚಿತ್ರದ ಟ್ರೈಲರ್ ಅನಾವರಣ ಸಮಾರಂಭ ಭದ್ರಾವತಿ ತಾಲ್ಲೋಕಿನ ಆನವೇರಿ ಗ್ರಾಮದ ಶ್ರೀದೇವಿ ಚಿತ್ರಮಂದಿರದಲ್ಲಿ ಅದ್ದೂರಿಯಾಗಿ ನಡೆಯಿತು. ಶ್ರೀ ಸಿದ್ದೇಶ್ವರ ಫಿಲ್ಮ್ ಲಾಂಚನದಲ್ಲಿ ಹಂಚಿನಸಿದ್ದಾಪುರ ಗ್ರಾಮದವರಾದ ಮಂಜುನಾಥ್.ಎಸ್.ಪಿ, ಟೆಕ್ಕಿಯಾಗಿರುವ ಸುನಿಲ್.ಎಂ ಮತ್ತು ಹರೀಶ್.ಎಚ್.ಎಸ್ ಜಂಟಿಯಾಗಿ ನಿರ್ಮಾಣ ಮಾಡಿದ್ದಾರೆ. ಹಲವು ವರ್ಷಗಳ ಕಾಲ ಚಿತ್ರರಂಗದ ನಾನಾ ವಿಭಾಗಗಳಲ್ಲಿ ಅನುಭವ ಪಡೆದುಕೊಂಡಿರುವ ಎಸ್.ಎಸ್.ಪ್ರಕಾಶ್ ರಾಜ್ ಸಿನಿಮಾಕ್ಕೆ ಕಥೆ,ಚಿತ್ರಕಥೆ,ಸಂಭಾಷಣೆ, ಸಾಹಿತ್ಯ ಬರೆದು ನಿರ್ದೇಶನ ಮಾಡುವ ಜತೆಗೆ ನಾಯಕನಾಗಿ ಕಾಣಿಸಿಕೊಂಡಿದ್ದಾರೆ. 'ಸುಮ್ಮಿದ್ರೆ ಮೂನ್ ರೈಜ್ ಆದ್ರೆ ಸನ್' ಎಂಬ ಕ್ಯಾಚಿ ಅಡಿಬರಹವಿದೆ.

ತಾರಾಗಣದಲ್ಲಿ ಎಸ್.ಎಸ್.ಪ್ರಕಾಶ್‌ರಾಜ್, ಜೈರಾಜ್, ಗೌಡಿಹುಳಿಯಾರ್, ಜೀವಮಹೇಶ್, ಅಶೋಕ್‌ನಾಯ್ಕ್, ಪ್ರಶಾಂತ್‌ಜೈ, ತನುಪ್ರಸಾದ್, ವೈಷ್ಣವಿ, ತ್ರಿವೇಣಿ.ಕೆ, ಲಾವಣ್ಯಗಂಗಾಧರಯ್ಯ, ಮಣಿಮೈದೊಳಲು, ದನಮ್‌ಪೋಲೀಸ್, ಶಿವಮೊಗ್ಗರಾಮಣ್ಣ, ಪ್ರಶಾಂತ್‌ಪವರ್, ತನುಜಾ ಮುಂತಾದವರು ನಟಿಸಿದ್ದಾರೆ. ಏಳು ಹಾಡುಗಳಿಗೆ ಯಶವಂತ ಭೂಪತಿ ಸಂಗೀತ, ಸಾಮ್ರಾಟ್ ನಾಗರಾಜ್ ಛಾಯಾಗ್ರಹಣ, ಸಂಕಲನ ಮಲ್ಲಿ, ಸಾಹಸ ವೈಲೆಂಟ್ ವೇಲು, ನೃತ್ಯ ಸ್ಟಾರ್ ನಾಗಿ, ಕಲೆ ನವೀನ್ ಹಾಡೋಹಳ್ಳಿ–ಸಚ್ಚಿನ್ ಗೌಡ ಹಾಸನ್ ಅವರದಾಗಿದೆ.

ತಂಡಕ್ಕೆ ಶುಭ ಹಾರೈಸಲು 'ಆಪಲ್ ಕಟ್' ಸಿನಿಮಾದ ನಾಯಕ ಸೂರ್ಯ, ನಿರ್ದೇಶಕಿ ಸಿಂಧೂಗೌಡ, 'ಉದಯ ಸೂರ್ಯ' ಸಿನಿಮಾ ಬಿಡುಗಡೆ ಜವಬ್ದಾರಿಯನ್ನು ಹೊತ್ತುಕೊಂಡಿರುವ ಸಚಿತ್ ಫಿಲಂಸ್‌ನ ವೆಂಕಟ್‌ಗೌಡ ಹಾಗೂ ಆನವೇರಿ, ಹಂಚಿನಸಿದ್ದಾಪುರ ಗ್ರಾಮದ ಮುಖ್ಯಸ್ಥರುಗಳು ಆಗಮಿಸಿದ್ದರು. ಎ2 ಮ್ಯೂಸಿಕ್ ಆಡಿಯೋ ಹಕ್ಕುಗಳನ್ನು ಪಡೆದುಕೊಂಡಿದೆ. ಶಿವಮೊಗ್ಗ, ನ್ಯಾಮತಿ, ಹೊನ್ನಾಳಿ, ಹಂಚಿನಸಿದ್ದಾಪುರ, ಬಸವಪುರ, ಆನವೇರಿ, ತಿಂಲ್ಲಾಪುರ ಸುಂದರ ತಾಣಗಳಲ್ಲಿ ಚಿತ್ರೀಕರಣ ನಡೆಸಲಾಗಿದೆ. ಅಂದಹಾಗೆ ಚಿತ್ರವು ಏಪ್ರಿಲ್ ಮೂರನೇ ವಾರದಲ್ಲಿ ತೆರೆ ಕಾಣುತ್ತಿದೆ.

# ಭಾರತ–ಭೂತಾನ್ ಗಡಿಯ ಸಮೀಪ ಮೂರು ಕಾಡಾನೆಗಳ ಸಾವು

**ಕೊಕ್ರಜಾರ್,ಮೇ4:** ಭಾರತ–ಭೂತಾನ್ ಗಡಿಯ ಸಮೀಪವಿರುವ ಅಸ್ಸಾಂನ ಮನಸ್ ರಾಷ್ಟ್ರೀಯ ಉದ್ಯಾನವನದಲ್ಲಿ ಮೂರು ಕಾಡು ಆನೆಗಳು ಮೃತಪಟ್ಟಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಉದ್ಯಾನದ ಪಶ್ಚಿಮ ಭಾಗದಲ್ಲಿರುವ ಪನ್ಬಾರಿ ಶ್ರೇಣಿಯ ಪಲೆಂಗ್ಗಿ ಬೀಟ್ ಪ್ರದೇಶದಲ್ಲಿ ಅರಣ್ಯ ರಕ್ಷಕರು ಆನೆ ಶವಗಳನ್ನು ಪತ್ತೆ ಮಾಡಿದ್ದಾರೆ ಎಂದು ಅವರು ಹೇಳಿದರು. ತನಿಖೆಯನ್ನು ಪ್ರಾರಂಭಿಸಲಾಗಿದೆ ಎಂದು ಅವರು ಹೇಳಿದರು. ಕಳ್ಳ ಬೇಟೆಗಾರರು ಆನೆಗಳನ್ನು ಕೊಂದಿರಬಹುದು ಎಂದು ಅವರು ಶಂಕೆ ವ್ಯಕ್ತಪಡಿಸಿದ್ದಾರೆ. ಆದರೆ ಎಲ್ಲಾ ಆಯಾಮಗಳಲ್ಲಿ ತನಿಖೆ ನಡೆಸಲಾಗುತ್ತಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಆನೆಗ 'ಳ ಅಂತಿಮ ವಿಧಿಗಳನ್ನು ಮಾಡುವ ಮೊದಲು ಅವುಗಳ ಮರಣೋತ್ತರ ಪರೀಕ್ಷೆಗಳನ್ನು ಕಾಡಿನಲ್ಲಿ ನಡೆಸಲಾಗುವುದು ಎಂದು ಅವರು ಹೇಳಿದರು.



ಸಾಂದರ್ಭಿಕ ಚಿತ್ರ

# ಕೆಪಿಎಸ್ ಅಭ್ಯರ್ಥಿಗಳ ಮೇಲೆ ಸರ್ಕಾರದ ಸೇಡು ತೀರಿಸಿಕೊಳ್ಳುತ್ತಿದೆ : ಅಶೋಕ ಆರೋಪ



**ಬೆಂಗಳೂರು, ಮೇ 4–**ಕೆಪಿಎಸ್‌ಸಿ ಪೂರ್ವಭಾವಿ ಪರೀಕ್ಷೆಯಲ್ಲಿನ ಭಾಷಾಂತರ ಎಡವಟ್ಟಿನಿಂದ ಅನ್ಯಾಯಕ್ಕೊಳಗಾಗಿದ್ದ ಅಭ್ಯರ್ಥಿಗಳು ಹೈಕೋರ್ಟ್ ಮೊರೆ ಹೋಗಿ, ಇಂದಿನಿಂದ ಆರಂಭವಾಗಿರುವ ಮುಖ್ಯ ಪರೀಕ್ಷೆಯನ್ನು ತೆಗೆದುಕೊಳ್ಳುವ ಅನುಮತಿ ಪಡೆದಿದ್ದರೆ, ಅವರಿಗೆ ಹಾಲ್ ಟಿಕೆಟ್ ಕೊಡಲು ಸತಾಯಿಸಿ ಸೇಡು ತೀರಿಸಿಕೊಳ್ಳುತ್ತಿದೆ ಈ ಪಾಪಿ ಕಾಂಗ್ರೆಸ್ ಸರ್ಕಾರ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ.

ಈ ಸಂಬಂಧ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಒಂದು ಕಡೆ ಧೋ ಎಂದು ಸುರಿಯುತ್ತಿರುವ ಮಳೆ, ಮತ್ತೊಂದು ಕಡೆ ಅರ್ಜಿ ತುಂಬಲು ಯಾವ ದಾಖಲಾತಿಗಳು ಬೇಕೆನ್ನುವ ಗೊಂದಲ, ಹತ್ತಿರದಲ್ಲಿ ಒಂದು ಜೆರಾಕ್ಸ್ ಅಂಗಡಿ ಇಲ್ಲ. ಕುಡಿಯೋಕೆ ನೀರಿಲ್ಲ, ಕಾಫಿ ತಿಂಡಿಗೆ ಒಂದು ಹೋಟೆಲ್ ಇಲ್ಲ. ಹೆಣ್ಣುಮಕ್ಕಳಿಗೆ ಶೌಚಾಲಯವಿಲ್ಲ, ಹಸುಗೂಸುಗಳಿಗೆ ಹಾಲುಣಿಸೋಕೆ ಜಾಗ ಇಲ್ಲ, ಮಧ್ಯರಾತ್ರಿ ಆದರೂ ಹಾಲ್ ಟಿಕೆಟ್ ಕೈಗೆ ಸಿಕ್ಕಿಲ್ಲ. ಬೆಳಗಾದರೆ ಪರೀಕ್ಷೆ. ಇಂತಹ ಅವಾಂತರದ ನಡುವೆ ಪಾಪ ಅಭ್ಯರ್ಥಿಗಳು ಪರೀಕ್ಷೆ ಬರೆಯುವುದಾದರೂ ಹೇಗೆ? ಎಂದು ಅವರು ತರಾಟೆಗೆ ತೆಗೆದುಕೊಂಡಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ನವರೇ, ಗ್ರಾಮೀಣ ಭಾಗದ ಕನ್ನಡ ಮಾಧ್ಯಮ ಅಭ್ಯರ್ಥಿಗಳು ಅಂದರೆ ತಮಗೆ ಯಾಕಿಷ್ಟು ದ್ವೇಷ? ಯಾಕಿಷ್ಟು ಅಸಡ್ಡೆ? ಬಡವರ ಮಕ್ಕಳು ಮುಂದೆ ಬರಬಾರದೇ? ಎಂದು ಅವರು ಪ್ರಶ್ನಿಸಿದ್ದಾರೆ. ವಿಧಾನಸಭೆ ಅಧಿವೇಶನದಲ್ಲಿ ಕನ್ನಡ ಮಾಧ್ಯಮ ಅಭ್ಯರ್ಥಿಗಳ ಹಿತಾಸಕ್ತಿ ಕಾಪಡುವುದಾಗಿ ತಾವು ಕೊಟ್ಟ ಮಾತಿನಂತೆ ನಡೆದುಕೊಳ್ಳಲಿಲ್ಲ. ಬೇರೆ ದಾರಿ ಇಲ್ಲದೆ ಅಭ್ಯರ್ಥಿಗಳು ಕೋರ್ಟ್ ಮೊರೆ ಹೋಗಿ ಆದೇಶ ತಂದರೆ ಹಾಲ್ ಟಿಕೆಟ್ ಕೊಡಲು ಸತಾಯಿಸಿ ನೆಮ್ಮದಿಯಾಗಿ ಪರೀಕ್ಷೆ ಬರೆಯಲೂ ತೊಂದರೆ ಮಾಡಿದ್ದೀರಿ ಎಂದು ಅವರು ಆರೋಪಿಸಿದ್ದಾರೆ. ನೂರಾರು ಕನಸುಗಳನ್ನು ಇಟ್ಟುಕೊಂಡು ಹಗಲು ರಾತ್ರಿ ಎನ್ನದೆ ವರ್ಷಗಟ್ಟಲೆ ತಯಾರಿ ನಡೆಸಿದ ಅಭ್ಯರ್ಥಿಗಳ ಶಾಪ ನಿಮ್ಮ ಸರ್ಕಾರಕ್ಕೆ ತಟ್ಟದೇ ಇರದು ಎಂದು ಅವರು ಕಿಡಿ ಕಾರಿದ್ದಾರೆ.

# ಸುಹಾಸ್ ಶೆಟ್ಟಿ ಹತ್ಯೆ ಮಾದರಿಯಲ್ಲೇ ಬೆಂಗಳೂರಲ್ಲಿ ಬೈಕ್‌ಗೆ ಕಾರಿನಿಂದ ಗುದ್ದಿ ರೌಡಿಯ ಕೊಲೆ



**ಬೆಂಗಳೂರು,ಮೇ 4–** ಮಂಗಳೂರಿನಲ್ಲಿ ಹಿಂದೂ ಕಾರ್ಯಕರ್ತ ಸುಹಾಸ್ ಶೆಟ್ಟಿ ಹತ್ಯೆ ರೀತಿಯಲ್ಲೆ ನಗರದ ಹೊರವಲಯದಲ್ಲಿ ರೌಡಿಯೊಬ್ಬನನ್ನು ಹಾಡಹಗಲೇ ಬರ್ಬರವಾಗಿ ಕೊಲೆ ಮಾಡಲಾಗಿದೆ. ನಗರದ ಹೊರವಲಯದ ಹಾರೋಹಳ್ಳಿಯ ಸಿದ್ದಾಪುರ ನಿವಾಸಿ ಸಂತೋಷ್ ಅಲಿಯಾಸ್ ಕರಡಿ (32) ಕೊಲೆಯಾದ ರೌಡಿ. ಕುಮಾರಸ್ವಾಮಿ ಲೇಔಟ್ ಪೊಲೀಸ್ ಠಾಣೆಯ ರೌಡಿ ಪಟ್ಟಿಯಲ್ಲಿ ಈತನ ಹೆಸರಿದೆ.

ಕುಮಾರಸ್ವಾಮಿ ಲೇಔಟ್ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದ್ದ ಕೊಲೆ ಪ್ರಕರಣದಲ್ಲಿ ರೌಡಿ ಸಂತೋಷ್ ಜೈಲು ಸೇರಿ ಹೊರ ಬಂದಿದ್ದನು. ನಂತರ ರೌಡಿ ಚಟುವಟಿಕೆಗಳಿಂದ ದೂರವಿರಲು ನಿರ್ಧರಿಸಿ ತನ್ನ ಊರಾದ ಸಿದ್ದಾಪುರಕ್ಕೆ ಹೋಗಿ ವ್ಯವಸಾಯ ಮಾಡಿಕೊಂಡಿದ್ದನು. ಇಂದು ಬೆಳಗ್ಗೆ 11.30 ರ ಸುಮಾರಿನಲ್ಲಿ ದ್ವಿಚಕ್ರ ವಾಹನದಲ್ಲಿ ಜಮೀನಿಗೆ ಹೋಗುತ್ತಿದ್ದಾಗ ದುಷ್ಕರ್ಮಿಗಳು ಕಾರಿನಲ್ಲಿ ಹಿಂಬಾಲಿಸಿಕೊಂಡು ಹೋಗಿ ಹಾರೋಹಳ್ಳಿಯ ಕೆಎಸ್‌ಆರ್‌ಟಿಸಿ ಡಿಪೋ ಬಳಿ ಆತನ ದ್ವಿಚಕ್ರ ವಾಹನಕ್ಕೆ ಡಿಕ್ಕಿ ಹೊಡೆದಿದ್ದಾರೆ. ಬೈಕ್‌ನಿಂದ ಸಂತೋಷ್ ಕೆಳಗೆ ಬೀಳುತ್ತಿದ್ದಂತೆ ದುಷ್ಕರ್ಮಿಗಳು ಮನಬಂದಂತೆ ಮಾರಕಸಗಳಿಂದ ಹೊಡೆದು ಕೊಲೆ ಮಾಡಿ ಪರಾರಿಯಾಗಿದ್ದಾರೆ. ಸುದ್ದಿ ತಿಳಿದು ಹಾರೋಹಳ್ಳಿ ಠಾಣೆ ಪೊಲೀಸರು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡು ಮೃತದೇಹವನ್ನು ಆಸ್ಪತ್ರೆಗೆ ರವಾನಿಸಿ ಆರೋಪಿಗಳಿಗಾಗಿ ಶೋಧ ನಡೆಸುತ್ತಿದ್ದಾರೆ.

ಹಳೆ ದ್ವೇಷದ ಹಿನ್ನಲೆಯಲ್ಲಿ ಈ ಕೊಲೆ ನಡೆದಿರಬಹುದೆಂದು ಪೊಲೀಸರು ಶಂಕೆ ವ್ಯಕ್ತಪಡಿಸಿದ್ದಾರೆ. ಮೊನ್ನೆ ರಾತ್ರಿ 8.30 ರ ಸುಮಾರಿನಲ್ಲಿ ಮಂಗಳೂರಿನ ಬಜಪೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಸುಹಾಸ್ ಶೆಟ್ಟಿ ತನ್ನ ಸ್ನೇಹಿತನ ಜೊತೆ ಕಾರಿನಲ್ಲಿ ಹೋಗುತ್ತಿದ್ದಾಗ ಮೀನಿನ ಟೆಂಪೂ ವಾಹನದಿಂದ ಡಿಕ್ಕಿ ಹೊಡೆಸಿ ನಂತರ ಏಕಾಏಕಿ ಸುಹಾಸ್ ಮೇಲೆ ಮಾರಕಾಸಗಳಿಂದ ಹಲ್ಲೆ ನಡೆಸಿ ಕೊಲೆ ಮಾಡಿ ಪರಾರಿಯಾಗಿದ್ದ ಘಟನೆ ಮಾಸುವ ಮುನ್ನವೆ ಇಂದು ಹಾಡಹಗಲೇ ರೌಡಿಯನ್ನು ನಡು ರಸ್ತೆಯಲ್ಲಿ ಕೊಲೆ ಮಾಡಲಾಗಿದೆ.

# ಒಳಮೀಸಲಾತಿ ಗಣತಿಯಲ್ಲಿ 'ಮಾದಿಗ' ಎಂದು ಬರೆಸಬೇಕು: ಉಮೇಶ ಹುನಕುಂಟಿ




**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಮೇ.4–** ಒಳಮೀಸಲಾತಿ ಜಾರಿಗಾಗಿ 3 ದಶಕಗಳ ಹೋರಾಟದ ಫಲವಾಗಿ ಕಾಂಗ್ರೆಸ್ ಸರ್ಕಾರ ಒಳಮೀಸಲಾತಿ ಜಾರಿಗೆ ತರಲು ಜಾತಿಗಣತಿ ಸಮೀಕ್ಷೆ ನಡೆಸಿದ್ದು, ಸಮಾಜದ ಎಲ್ಲಾ ಬಾಂಧವರು ಜಾತಿ ಕಾಲಂನಲ್ಲಿ 'ಮಾದಿಗ' ಎಂದು ನೊಂದಾಯಿಸಬೇಕೆಂದು ಉಮೇಶ ಹುನಕುಂಟಿ ಹೇಳಿದರು.ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಯನ್ನು ಉದ್ದೇಶಿಸಿ ಮಾತನಾಡಿದ ಅವರು, ಒಳಮೀಸಲಾತಿ ಜಾರಿಗಾಗಿ ರಾಜ್ಯದಲ್ಲಿ 3 ದಶಕಗಳಿಂದ ನಿರಂತರವಾಗಿ ಹೋರಾಟ ಮಾಡಲಾಗುತ್ತಿದೆ. ನೆರೆಯ ಆಂಧ್ರ, ತೆಲಂಗಾಣ ರಾಜ್ಯಗಳಲ್ಲಿಯೂ ಈ ಬಗ್ಗೆ ಹೋರಾಟ ನಡೆದಿದ್ದು, ಈ ಹೋರಾಟಕ್ಕೆ ಹೆಚ್ಚಿನ ಶಕ್ತಿ ಬಂದಿದೆ. ಹೋರಾಟಗಾರರು ಸಮಾಜದ ಮುಖಂಡರು ನಿರಂತರವಾಗಿ ಹೋರಾಟ ನಡೆಡಿದ್ದರಿಂದ ಸರ್ಕಾರ ಒಳಮೀಸಲಾತಿ ಜಾರಿಗೆ ಮುಂದಾಗಿದೆ. ಮೇ 5 ರಿಂದ ಒಳಮೀಸಲಾತಿ ಸಮೀಕ್ಷೆ ಆರಂಭವಾಗಲಿದ್ದು, ಸಮೀಕ್ಷೆ ದಾರರು ಮನೆ ಮನೆಗೆ ತೆರಳಿ ಮಾಹಿತಿ ಪಡೆಯಲಿದ್ದಾರೆ. ಸಮಾಜಕ್ಕೆ ಗಣತಿ ಬಗ್ಗೆ ಮಾಹಿತಿ ನೀಡುವುದು ನಮ್ಮ ಜವಾಬ್ದಾರಿಯಾಗಿದೆ. ಸಮಾಜದ ಜನರು ಯಾವುದೇ ಗೊಂದಲಕ್ಕೆ ಒಳಗಾಗದೇ ಕ್ರಮ ಸಂಖ್ಯೆ 61 ರಲ್ಲಿ 'ಮಾದಿಗ' ಎಂದು ಬರೆಯಿಸಬೇಕೆಂದು ಮನವಿ ಮಾಡಿದರು. ಮುಖಂಡರಾದ ಯಂಕಪ್ಪ ಚಿತ್ತಾಪುರು, ಹುಸೇನಪ್ಪ ಯರಡೋಣಿ, ಆಂಜಿನೇಯ ಭಂಡಾರಿ, ನಾಗರಾಜ, ರಾಘವೇಂದ್ರ ತುಪ್ಪದ, ದುರಗಪ್ಪ ಸೇರಿದಂತೆ ಇದ್ದರು.

# ಕಾಂಗ್ರೆಸ್ ಸರ್ಕಾರದ ದುರಾಡಳಿತದಲ್ಲಿ ಯಾರಿಗೂ ನೆಮ್ಮದಿಯಿಲ್ಲ : ಬಿ.ವೈ.ವಿಜಯೇಂದ್ರ



**ಬೆಂಗಳೂರು, ಮೇ 4–** ಕಾಂಗ್ರೆಸ್ ಸರ್ಕಾರದ ದುರಾಡಳಿತದಲ್ಲಿ ಯಾರಿಗೂ ನೆಮದಿಯಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಟೀಕಿಸಿದ್ದಾರೆ.ಈ ಸಂಬಂಧ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು ಕೆಎಎಸ್ ಪರೀಕ್ಷೆಗೆ ಸಂಬಂಧಿಸಿದಂತೆ ನೊಂದವರ ದನಿಯಾಗಿ ರಾಜ್ಯ ಬಿಜೆಪಿ ನಿಲ್ಲಲಿದೆ ಎಂದಿದ್ದಾರೆ.

ಕರ್ನಾಟಕ ಲೋಕಸೇವಾ ಆಯೋಗವು ನಡೆಸಿದ ಕೆಎಎಸ್ ಪೂರ್ವಭಾವಿ ಪರೀಕ್ಷೆಯಲ್ಲಿನ ಭಾಷಾಂತರ ಎಡವಟ್ಟಿನಿಂದ ಅನ್ಯಾಯಕ್ಕೊಳಗಾಗಿದ್ದ ಅಭ್ಯರ್ಥಿಗಳು ಹೈಕೋರ್ಟ್ ಮೆಟ್ಟಿಲೇರಿ ಇಂದಿನಿಂದ ಆರಂಭವಾಗಿರುವ ಮುಖ್ಯ ಪರೀಕ್ಷೆ ಬರೆಯಲು ಅವಕಾಶ ಪಡೆದಿದ್ದರು. ಆದರೆ, ಮಧ್ಯರಾತ್ರಿ ಅರ್ಜಿ ತುಂಬಿ ಪ್ರವೇಶ ಪತ್ರ ಪಡೆಯುವಂತೆ ಗೊಂದಲ ಸೃಷ್ಟಿಸಿರುವ ಕೆಪಿಎಸ್‌ಸಿ ಕಾರ್ಯವೈಖರಿ ಪರೀಕ್ಷಾರ್ಥಿಗಳಿಗೆ ಅನಗತ್ಯ ಕಿರುಕುಳ ನೀಡುವ ದುರುದ್ದೇಶವನ್ನು ಪ್ರತಿಬಿಂಬಿಸಿದೆ.

ಉದ್ಯೋಗಾಕಾಂಕ್ಷಿ ಅಭ್ಯರ್ಥಿಗಳ ಭವಿಷ್ಯದ ಜೊತೆ ಕೆಪಿಎಸ್‌ಸಿ ಚೆಲ್ಲಾಟವಾಡುತ್ತಿದ್ದರೆ ರಾಜ್ಯ ಸರ್ಕಾರ ಕಣ್ಣುಮುಚ್ಚಿಕೊಂಡು ನೋಡುತ್ತಿದೆ ಎಂದು ಟೀಕಿಸಿದ್ದಾರೆ.ಮೇ 2ರ ಮಧ್ಯರಾತ್ರಿ 12 ಗಂಟೆಯವರೆಗೆ ಕೆಪಿಎಸ್‌ಸಿ ಕಚೇರಿಯಲ್ಲಿ ಅರ್ಜಿ ಸಲ್ಲಿಸಿ ಮಧ್ಯರಾತ್ರಿ ಹಾಲ್ ಟಿಕೆಟ್ ಪಡೆದು, ಮರುದಿನ ಬೆಳಗ್ಗೆಯೇ ಪರೀಕ್ಷಾ ಕೇಂದ್ರಕ್ಕೆ ಹೋಗಿ ಪರೀಕ್ಷೆ ಬರೆಯುವಂತೆ ಮಾಡಿರುವ ಗೊಂದಲದ ವ್ಯವಸ್ಥೆಯಿಂದ ಹಿಂಸೆ ಅನುಭವಿಸುತ್ತಿರುವ ಪರೀಕ್ಷಾರ್ಥಿಗಳು ಹಾಗೂ ಅವರ ಕುಟುಂಬದವರ ಶಾಪ ರಾಜ್ಯ ಸರ್ಕಾರಕ್ಕೆ ತಟ್ಟದೇ ಬಿಡದು ಎಂದು ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ವಿಧಾನಸಭಾ ಅಧಿವೇಶನದಲ್ಲಿ ಕನ್ನಡ ಮಾಧ್ಯಮ ಅಭ್ಯರ್ಥಿಗಳ ಹಿತಾಸಕ್ತಿ ಕಾಪಾಡುವುದಾಗಿ ಸ್ವತಃ ಮುಖ್ಯಮಂತ್ರಿಗಳೇ ಮಾತು ಕೊಟ್ಟು, ಪರೀಕ್ಷಾರ್ಥಿಗಳಿಗೆ ನ್ಯಾಯ ಒದಗಿಸುವಲ್ಲಿ ಸಂಪೂರ್ಣ ವಿಫಲರಾಗಿದ್ದಾರೆ ಎಂದು ಆರೋಪಿಸಿದ್ದಾರೆ.

# ಬಿ.ಗಣೇಕಲ್ : ಖಾತ್ರಿ ಕೆಲಸಕ್ಕೆ ಕಾದು ಕುಳಿತ ಕೂಲಿಕಾರರು

**ನರೇಗಾ ಹಾಜರಾತಿ ಪಡೆಯಲು ಗ್ರಾಪಂ ಹಿಂದೇಟು | ವಯಕ್ತಿಕ ನೆಪಹೇಳಿ ಪಂಚಾಯತಿಗೆ ಬರುತ್ತಿಲ್ಲ ಪಿಡಿಓ**



**ಯುವ ಮಾರ್ಗ ಸುದ್ದಿ**

**ಅರಕೇರಾ,ಮೇ.4:** ನರೇಗಾ ಯೋಜನೆ ಅಡಿಯಲ್ಲಿ ಕೆಲಸವನ್ನು ಪ್ರಾರಂಭಿಸುವಂತೆ 500 ಕ್ಕೂ ಹೆಚ್ಚು ಕೂಲಿಕಾರರು ಗ್ರಾಮ ಪಂಚಾಯತಿ ಕಚೇರಿ ಮುಂದೆ ಅಧಿಕಾರಿಗಳ ಬರುವಿಕೆಗಾಗಿ 5 ಗಂಟೆಗಳ ಕಾಲ ಕಾದು ಕುಳಿತ ಪ್ರಸಂಗ ಶನಿವಾರ ನಡೆದಿದೆ.

ತಾಲ್ಲೂಕಿನ ಬಿ.ಗಣೇಕಲ್ ಗ್ರಾಮ ಪಂಚಾಯತಿಯಲ್ಲಿ ಖಾತ್ರಿ ಯೋಜನೆ ಅಡಿಯಲ್ಲಿ ಸಮುದಾಯ ಆಧಾರಿತ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಆದರೆ ಕೂಲಿಕಾರರ ಹಾಜರಾತಿ ಪಡೆಯಲು ಗ್ರಾಮ ಪಂಚಾಯತಿ ಅಧಿಕಾರಿ, ಸಿಬ್ಬಂದಿಗಳು ಹಿಂದೇಟು ಹಾಕಿ ಬಡವರ ಹಣ ಕೊಳ್ಳೆಹೊಡೆಯಲು ಹುನ್ನಾರ ನಡೆಸಿದ್ದಾರೆ. ಕಳೆದೆರಡು ದಿನಗಳಿಂದ ಕಾಮಗಾರಿ ಸ್ಥಳದಲ್ಲಿ ಕಾದು ಕುಳಿತರು ನಮ್ಮ ಹಾಜರಾತಿ ಹಾಕುತ್ತಿಲ್ಲ ಖಾತ್ರಿ ಯೋಜನೆಯನ್ನು ನಂಬಿಕೊಂಡ ನಮ್ಮ ಸ್ಥಿತಿ ಹೇಳತೀರದಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕೂಲಿ ಉದ್ಯೋಗದ ಕಾಮಗಾರಿಗಳ ಮೂಲಕ ಗ್ರಾಮೀಣ ಪ್ರದೇಶಗಳಲ್ಲಿ ಬಡತನ ನಿರ್ಮೂಲನೆಗಾಗಿ ಯೋಜನೆ'ಯನ್ನು ಅನುಷ್ಠಾನಗೊಳಿಸುತ್ತಿದೆ. ಅಧಿಕಾರಿಗಳ ನಿರ್ಲಕ್ಷ್ಯದಿಂದ ಉದ್ಯೋಗ ಖಾತ್ರಿ ಯೋಜನೆ ಹಳ್ಳ ಹಿಡಿದಿದ್ದು ಬಡವರಿಗೆ ಶಾಪವಾಗಿ ಪರಿಣಮಿಸಿದೆ. ಮನರೇಗಾ ಕಾಮಗಾರಿಗಳಲ್ಲಿ ಪಾರದರ್ಶಕತೆ ತರಲು ಜಾರಿಗೊಳಿಸಿದ್ದ ಎಸ್‌ಎಂಎಂಎಸ್ ಮೊಬೈಲ್ ಆಪ್ ಬಳಕೆ ಮಾಡುತ್ತಿದ್ದು ಅದು ಸಮರ್ಪಕವಾಗಿ ಕಾರ್ಯಗತವಾಗುತ್ತಿಲ್ಲ ಇಂದರಿಂದ ಕೂಲಿ ಕಾರ್ಮಿಕರ ಹಾಜರಾತಿಗೆ ಸಮಸ್ಯೆಯನ್ನುಂಟುಮಾಡಿದೆ. ಬೇಸಿಗೆ ಸಮಯ ಖಾತ್ರಿ ಕೆಲಸ ಬೆಳಿಗ್ಗೆ 8 ರಿಂದ ಮಧ್ಯಾಹ್ನ 12 ಗಂಟೆಗೆ ಬದಲಾಯಿಸಲಾಗಿದೆ. ವಿಪರ್ಯಾಸವೆಂದರೆ ಇಲ್ಲಿ 11 ಗಂಟೆಯಾದರು ಹಾಜರಾತಿ ಪಡೆಯಲು ನಿಯೋಜಿತ ಸಿಬ್ಬಂದಿ ಸಮಯ ಪಾಲನೆ ಮರೆತಿದ್ದು ಬಡ ಕೂಲಿಕಾರರನ್ನು ಮತ್ತಷ್ಟು ಕೆರಳಿಸಿದೆ.

**ನೀರು ನೆರಳಿನ ವ್ಯವಸ್ಥೆಯಿಲ್ಲ:** ಉದ್ಯೋಗ ಖಾತ್ರಿ ಕೆಲಸ ಮಾಡುವ ಸ್ಥಳದಲ್ಲಿ ಕುಡಿಯುವ ನೀರು, ನೆರಳಿನ ವ್ಯವಸ್ಥೆ, ಪ್ರಥಮ ಚಿಕಿತ್ಸೆ ಪೆಟ್ಟಿಗೆ ನೀಡಬೇಕು. ಆದರೆ ಇದ್ಯಾವ ಸೌಲಭ್ಯಗಳು ಗ್ರಾಮ ಪಂಚಾಯತಿ ಒದಗಿಸುತ್ತಿಲ್ಲ.

**ಅಭಿವೃದ್ಧಿ ಅಧಿಕಾರಿಯನ್ನು ಬದಲಿಸಿ:** ಬಿ.ಗಣೇಕಲ್ ಗ್ರಾಮ ಪಂಚಾಯತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಭಿವೃದ್ಧಿ ಅಧಿಕಾರಿ ಶರಣಯ್ಯ ಅವರನ್ನು ಕೂಡಲೆ ವರ್ಗಾಯಿಸಬೇಕು. ಎರಡು ವರ್ಷಗಳಿಂದ ಇಲ್ಲಿ ನಿಯೋಜನೆಗೊಂಡಿದ್ದು, ಹೇಳಿಕೊಳ್ಳುವಂತ ಅಭಿವೃದ್ಧಿ ಕೆಲಸವಾಗಿಲ್ಲ ಕುಡಿಯುವ ನೀರು, ಚರಂಡಿ ಸ್ವಚ್ಛತೆ, ಸಾರ್ವಜನಿಕರ ಸಮಸ್ಯೆಗೆ ಸ್ಪಂದಿಸುತ್ತಿಲ್ಲ, ದೂರವಾಣಿ ಕರೆಗೆ ಸಿಗುವುದಿಲ್ಲ. ವಯಕ್ತಿಕ ನೆಪ ಹೇಳಿ ಪಂಚಾಯತಿಗೆ ಬರುವುದಿಲ್ಲ ಎಂದು ಸ್ಥಳೀಯರು ಆರೋಪಿಸಿದರು.

> ಇಲ್ಲಿ ಗ್ರಾಮ ಪಂಚಾಯತಿ ಇದ್ದರು ಸಹ ಇಲ್ಲದಂತಾಗಿದೆ. ಪಿಡಿಓ ಸೇರಿ ಸಿಬ್ಬಂದಿ ಸಹ ಸರಿಯಾದ ಸಮಯಕ್ಕೆ ಹಾಜರಾಗುತ್ತಿಲ್ಲ. ಗ್ರಾಪಂ ವ್ಯಾಪ್ತಿಯಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಕಾಡುತ್ತಿದೆ. ಉದ್ಯೋಗ ಖಾತ್ರಿ ಯೋಜನೆ ಅಸಮರ್ಪಕವಾಗಿದೆ. ಮೇಲಾಧಿಕಾರಿಗಳ ಗಮನಕ್ಕೆ ತಂದರೆ ಒಬ್ಬರ ಮೇಲೊಬ್ಬರ ಮೇಲೆ ನೆಪ ಹೇಳಿ ಜಾರಿಕೊಳ್ಳುತ್ತಿದ್ದಾರೆ.
>
> –ಹಾಜಿ ಮಸ್ತಾನ್ ರೈತ ಸಂಘದ ಮುಖಂಡ, ಬಿ.ಗಣೇಕಲ್.

> ಉದ್ಯೋಗ ಖಾತ್ರಿ ಕೆಲಸದಲ್ಲಿ ಯಾವುದೇ ರೀತಿ ತೊಂದರೆಯಾಗದಂತೆ ಕ್ರಮ ವಹಿಸಲಾಗುವುದು. ಬಿ.ಗಣೇಕಲ್ ಗ್ರಾಮ ಪಂಚಾಯತಿಯಲ್ಲಿನ ಸಮಸ್ಯೆಗಳನ್ನು ಬಗೆಹರಿಸಲು ಪ್ರಯತ್ನಮಾಡಲಾಗುವದು.
>
> – ಬಸವರಾಜ ತಾಪಂ ಇಓ ದೇವದುರ್ಗ.

# ಜಾತಿಗಣತಿಯಲ್ಲಿ 'ಛಲುವಾದಿ' ಎಂದು ನಮೋದಿಸಿ : ಲಿಂಗಪ್ಪ ಪರಂಗಿ




**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಮೇ.4–** ಪರಿಶಿಷ್ಟ ಜಾತಿಲ್ಲಿರುವ 101 ಜಾತಿಗಳಿಗೆ ಜನಸಂಖ್ಯೆಗೆ ಅನುಗುಣವಾಗಿ ಒಳ ಮೀಸಲಾತಿ ಪ್ರಮಾಣ ಹಂಚಿಕೆಗಾಗಿ ನಿವೃತ್ತ ನ್ಯಾಯಮೂರ್ತಿ ಎಚ್.ಎಸ್. ನಾಗಮೋಹನದಾಸ್ ಆಯೋಗ ಪರಿಶಿಷ್ಟ ಜಾತಿಗಳ ಸಮೀಕ್ಷೆ ಮೇ 5 ರಿಂದ ನಡೆಸಲಿದೆ. ಈ ಸಂದರ್ಭದಲ್ಲಿ ಬಲಗೈಗೆ ಸಂಬಂಧಿಸಿದ 37 ಉಪ ಜಾತಿಗಳಿಗೆ ಸೇರಿದವರು ತಮ್ಮ ಉಪಜಾತಿ ಎದುರು ಕಡ್ಡಾಯವಾಗಿ ಛಲವಾದಿ ಎಂದು ನಮೂದಿಸಿ ಎಂದು ಮಹಾಸಭಾದ ತಾಲೂಕು ಅಧ್ಯಕ್ಷ ಲಿಂಗಪ್ಪ ಪರಂಗಿ ಹೇಳಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ಧಿಗೋಷ್ಠಿ ನಡೆಸಿ ಮಾತನಾಡಿದ ಅವರು, 'ಆದಿಕರ್ನಾಟಕ, ಆದಿ ದ್ರಾವಿಡ, ಆದಿ ಆಂಧ್ರ ಎನ್ನುವುದು ಜಾತಿಗಳಲ್ಲ. ಬದಲಿಗೆ ಉಪ ಜಾತಿಗಳ ಪ್ರಾತಿನಿಧಿಕ ಹೆಸರುಗಳು. ಆದರೂ 101 ಜಾತಿಗಳ ಪಟ್ಟಿಯಲ್ಲಿವೆ' ಎಂದರು.ಬಲಗೈಗೆ ಸೇರಿದವರು ಒಳ ಮೀಸಲಾತಿಗೆ ವಿರೋಧಿಸದೇ ವೈಜ್ಞಾನಿಕ ಸಮೀಕ್ಷೆ ಮಾಡಿ ಹಂಚಿಕೆ ಮಾಡಿ ಎಂದು ಹೇಳಿದ್ದೇವೆ. ಸುಪ್ರೀಂಕೋರ್ಟ್ ಕೂಡ ಅದನ್ನೇ ಪುನರುಚ್ಚರಿಸಿದೆ. ಜೊತೆಗೆ ರಾಜ್ಯ ಸರ್ಕಾರದ ತೀರ್ಮಾನವು ನ್ಯಾಯಾಂಗದ ಪುನರ್ ಪರಿಶೀಲನೆಗೆ ಒಳಪಟ್ಟಿರುತ್ತದೆ ಎಂದರು .ಸಮೀಕ್ಷೆ ಸಂದರ್ಭದಲ್ಲಿ ಉಪ ಜಾತಿಗಳ ಎದುರು ಬಲಗೈ, ಛಲವಾದಿ ಅಥವಾ ಹೊಲೆಯ ಎಂದು ಯಾವುದಾದರೂ ಒಂದನ್ನು ನಮೂದಿಸದಿದ್ದರೆ ಸಂಖ್ಯೆಯಲ್ಲಿ ಏರುಪೇರಾಗಲಿದೆ. ಸರ್ಕಾರದ ಸೌಲಭ್ಯಗಳು ಮೀಸಲಾತಿಯಿಂದ ಶಾಶ್ವತ'ವಾಗಿ ವಂಚಿತರಾಗಬೇಕಾಗು ತ್ತದೆ. ಹಾಗಾಗಿ ಸಮೀಕ್ಷೆಯಲ್ಲಿ ಎಚ್ಚರಿಕೆಯಿಂದ ಜಾತಿಯನ್ನು ನಮೂದಿಸಬೇಕೆಂದರು.

ಈ ಸಂದರ್ಭದಲ್ಲಿ ವಿಶ್ವಕ್ರಾಂತಿ ಗೆಜ್ಜಲಗಟ್ಟಾ, ಶಿವಪ್ಪ ಮಾಚನೂರು, ಸಂಜೀವಪ್ಪ ಛಲವಾದಿ, ಪಂಪಾಪತಿ ಪರಂಗಿ, ಶರಣಪ್ಪ ಹುನಕುಂಟಿ, ಅಮರೇಶ ಸರ್ಜಾಪೂರು ಇದ್ದರು.

# ಜಾತಿ ಗಣತಿ ಕುರಿತ ಡಿಎಂಕೆ ಹೇಳಿಕೆಗೆ ನಿರ್ಮಲಾ ಸೀತಾರಾಮ ತಿರುಗೇಟು



**ಚೆನ್ನೈ. ಮೇ 4:** ಮುಂಬರುವ ಜನಗಣತಿ ಪ್ರಕ್ರಿಯೆಯಲ್ಲಿ ಜಾತಿ ಗಣತಿಯನ್ನು ಸೇರಿಸುವ ಕೇಂದ್ರದ ನಿರ್ಧಾರವು ಕಷ್ಟಪಟ್ಟು ಗಳಿಸಿದ ಗೆಲುವು ಎಂಬ ಡಿಎಂಕೆ ಸರ್ಕಾರದ ಹೇಳಿಕೆಯನ್ನು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ತಳ್ಳಿಹಾಕಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಸೀತಾರಾಮನ್, ಕೇಂದ್ರ ಸಚಿವ ಸಂಪುಟವು ಜಾತಿ ಜನಗಣತಿಗೆ ಅನುಮೋದನೆ ನೀಡಿದೆ ಮತ್ತು ಈ ಪ್ರಕ್ರಿಯೆಯ ಮೂಲಕ ಸಂಗ್ರಹಿಸಿದ ದತ್ತಾಂಶವು ಸಮಾಜದ ಬಡ ಮತ್ತು ಅಂಚಿನಲ್ಲಿರುವ ವರ್ಗಗಳನ್ನು ಉತ್ತಮವಾಗಿ ಬೆಂಬಲಿಸಲು ಸರ್ಕಾರಕ್ಕೆ ಅನುವು ಮಾಡಿಕೊಡುತ್ತದೆ ಎಂದು ಹೇಳಿದರು.

ಮುಂಬರುವ ಜನಗಣತಿ ಪ್ರಕ್ರಿಯೆಯಲ್ಲಿ ಜಾತಿ ಗಣತಿಯನ್ನು ಸೇರಿಸುವ ಕೇಂದ್ರದ ನಿರ್ಧಾರವು ತಮ್ಮ ಪಕ್ಷ ಮತ್ತು ತಮಿಳುನಾಡು ಸರ್ಕಾರಕ್ಕೆ ಬಿಕಷ್ಟಪಟ್ಟು ಗಳಿಸಿದ ಗೆಲುವು ಎಂದು ಸ್ಟಾಲಿನ್ ಇತ್ತೀಚೆಗೆ ಹೇಳಿದ್ದರು.ಡಿಎಂಕೆ ವಿರುದ್ಧ ವಾಗ್ದಾಳಿ ಮುಂದುವರಿಸಿದ ಸೀತಾರಾಮನ್, ಇಂದಿಗೂ ತಮಿಳುನಾಡಿನಾದ್ಯಂತ ಅಂಗಡಿ ಫಲಕಗಳು ಮಾಲೀಕರ ಸಮುದಾಯದ ಹೆಸರುಗಳನ್ನು ಪ್ರದರ್ಶಿಸುತ್ತವೆ. ಈ ವಿಷಯದ ಬಗ್ಗೆ ಯಾವುದೇ ರಾಜಕೀಯ ಟೀಕೆಗಳನ್ನು ಮಾಡುವ ಬದಲು, ನಾವು ಸ್ವಲ್ಪ ಬಡವರು ಮತ್ತು ದೀನದಲಿತರಿಗೆ ಹೇಗೆ ಸಹಾಯ ಮಾಡಬಹುದು ಎಂದು ಚರ್ಚಿಸಬೇಕೆಂದು ನಾನು ಪ್ರಾಮಾಣಿಕವಾಗಿ ಬಯಸುತ್ತೇನೆ. ಕೇಂದ್ರ ಸರ್ಕಾರವು ಕಾರ್ಪೊರೇಟ್ಗಳ ಪರವಾಗಿದೆ ಎಂಬ ಆರೋಪಗಳಿಗೆ ಪ್ರತಿಕ್ರಿಯಿಸಿದ ಅವರು, ಅದನ್ನು ಸ್ಪಷ್ಟವಾಗಿ ನಿರಾಕರಿಸಿದರು ಮತ್ತು ರಾಜ್ಯ ಸರ್ಕಾರವು ಹೂಡಿಕೆ ಪ್ರಸ್ತಾಪಗಳನ್ನು ಸ್ವೀಕರಿಸಿದ್ದರೆ, ಅದು ಸ್ವಯಂಚಾಲಿತವಾಗಿ ಪಕ್ಷಪಾತವನ್ನು ತೋರಿಸುತ್ತಿದೆ ಎಂದು ಸೂಚಿಸುತ್ತದೆಯೇ ಎಂದು ಪ್ರಶ್ನಿಸಿದರು.

# ಬೆಂಬಲ ಬೆಲೆ ಯೋಜನೆಯಡಿ ರಾಗಿ ಖರೀದಿ ಪ್ರಮಾಣ ಗರಿಷ್ಠ 30 ಕ್ವಿಂಟಾಲ್‌ಗೆ ಹೆಚ್ಚಳ



**ಬೆಂಗಳೂರು, ಮೇ 4–** 2024–25ನೇ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ನೋಂದಾಯಿತ ರೈತರಿಂದ ರಾಗಿ ಖರೀದಿಸುವ ಪ್ರಮಾಣವನ್ನು ಹೆಚ್ಚಿಸಲಾಗಿದ್ದು, ಖರೀದಿ ಕೇಂದ್ರಗಳಿಗೆ ಇನ್ನೂ ನೀಡದ ರೈತರಿಂದ ಮಾತ್ರ ಪ್ರತಿ ಎಕರೆಗೆ 10 ಕ್ವಿಂಟಾಲ್ ನಂತೆ ಗರಿಷ್ಠ 30 ಕ್ವಿಂಟಾಲ್ ರಾಗಿಯನ್ನು ಖರೀದಿ ಮಾಡಲಾಗುವುದು ಎಂದು ಜಿಲ್ಲಾಧಿಕಾರಿ ಎ.ಬಿ ಬಸವರಾಜು ಅವರು ತಿಳಿಸಿದ್ದಾರೆ.

ರಾಗಿ ಖರೀದಿ ಪ್ರಕ್ರಿಯೆಗೆ ಮಾ.1 ರಿಂದ ವಿದ್ಯುಕ್ತವಾಗಿ ಚಾಲನೆ ನೀಡಲಾಗಿದ್ದು, ಮಾ.3 ರಿಂದ ಜೂನ್ 30 ರವರೆಗೆ ರಾಗಿ ಖರೀದಿಯ ಅವಧಿಯನ್ನು ವಿಸ್ತರಣೆ ಮಾಡಲಾಗಿದೆ. ಜಿಲ್ಲೆಯ ಎಲ್ಲಾ ತಾಲ್ಲೂಕು ಖರೀದಿ ಕೇಂದ್ರಗಳಲ್ಲಿ ರಾಗಿ ಖರೀದಿ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗಿದ್ದು, ನೋಂದಾಯಿತ ರೈತರು ಸಂಬಂಧಪಟ್ಟ ತಾಲ್ಲೂಕುಗಳ ಖರೀದಿ ಕೇಂದ್ರಗಳಿಗೆ ರಾಗಿಯನ್ನು ನಿಯಮಾನುಸಾರ ನೀಡಬಹುದಾಗಿರುತ್ತದೆ.

2024–25 ನೇ ಸಾಲಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರಾಗಿ ಖರೀದಿ ಮಾಡಲು ಬೆಂಗಳೂರು ಗ್ರಾಮಾಂತರ ಜಿಲ್ಲೆಯ 4 ತಾಲ್ಲೂಕುಗಳಲ್ಲಿ ರಾಗಿ ಖರೀದಿ ಕೇಂದ್ರಗಳನ್ನು ತೆರೆದು, ರಾಗಿ ಬೆಳೆದಿರುವ ರೈತರಿಂದ ನಿಯಮಾ ನುಸಾರ ಅಗತ್ಯ ದಾಖಲ'ಗಳನ್ನು ಪಡೆದು ನೋಂದಾ ಯಿಸಿಕೊಳ್ಳಲಾಗಿದೆ.

ರಾಗಿ ಖರೀದಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿಗಾಗಿ, ಬೆಂ ಗಳೂರು ಗ್ರಾಮಾಂತರ ಜಿಲ್ಲೆಯ ತಾಲ್ಲೂಕು ಖರೀದಿ ಅಧಿಕಾರಿಗಳು ದೇವನಹಳ್ಳಿ ತಾಲ್ಲೂಕಿನ ಎ.ಅಚ್ಯುತ (9900136687), ದೊಡ್ಡಬಳ್ಳಾಪುರ ತಾಲ್ಲೂಕಿನ ಎಚ್.ಎನ್. ನಾರಾಯಣ (9886141435), ನೆಲಮಂಗಲ ತಾಲ್ಲೂಕಿನ ವೈ.ಎಸ್.ನಾರಾಯಣ (9482991630), ಹೊಸಕೋಟೆ ತಾಲ್ಲೂಕಿನ ಶಿವಕುಮಾರ್ (9880361514) ಸಂಪರ್ಕಿಸಬಹುದಾಗಿದೆ.

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: **ANILKUMAR H**